ಸಂಪುಟ : 10 ಸಂಚಿಕೆ: 88 ಪುಟ : 4+2 ಬೆಲೆ: 3.00 ಬುಧವಾರ ಮೇ 07 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 88 Pages : 4+2 Price : 3.00 Wednesday May 07 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ 07 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 29 – ರಾಜೀವ ಗಾಂಧಿನಗರ ಮೇಲಿನ ಭಾಗಗಳು. ವಾರ್ಡ್ ನಂ. 28 – ಪಂಚಾಕ್ಷರಿ ನಗರ 4, 5ನೇ ಕ್ರಾಸ್‌ಗಳು. ವಾರ್ಡ್ ನಂ. 16 – ಸುಣ್ಣದ ಭಟ್ಟಿ, ಕುಷ್ಟರೋಗ ಕಾಲೋನಿ, ಕುಂಬೇಶ್ವರ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಎಸ್ ಬಿ. ನಗರ ಪೂರ್ತಿ ಭಾಗಗಳು. ವಾರ್ಡ್ ನಂ. 22 – ಅಮರೇಶ್ವರನಗರ ತಾಜ್ ನಗರ. ವಾರ್ಡ್ ನಂ. 1 – ಎಸ್ ಎಂ. ಕೃಷ್ಣ ನಗರ ಪೂರ್ತಿ ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ.

ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ ಅಭಿಮತ

# ನೂತನ ಜಿಲ್ಲೆಯಾದರೂ ಸಾಧನೆಯಲ್ಲಿ ಮುಂದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿಯಿಂದ ಭ್ರಷ್ಟಾಚಾರ ರಹಿತವಾಗಿ 1 ಕೋಟಿ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತುವ ಕ್ರಾಂತಿಕಾರಕ ಕಾರ್ಯವಾಗಿದೆ ಎಂದು ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.




ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಗದಗ ಜಿಲ್ಲೆಯಲ್ಲಿ ಶೇ 98.2ರಷ್ಟು ಪ್ರಮಾಣದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ತಲುಪಿದೆ. ಇನ್ನು 15 ದಿನಗಳಲ್ಲಿ ಶೇ 99ರಷ್ಟು ತಲುಪುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರಲ್ಲದೆ, ಗದಗ ಜಿಲ್ಲೆ ನೂತನ ಜಿಲ್ಲೆಯಾದರೂ ಸಾಧನೆಯಲ್ಲಿ, ಅಭಿವೃದ್ಧಿಯಲ್ಲಿ ಹಿಂದೆ ಉಳಿದಿಲ್ಲ ಎಂದರು.

> ಪಿಯುಸಿಯಲ್ಲಿ 31ನೇ ಸ್ಥಾನದಿಂದ 25ನೇ ಸ್ಥಾನಕ್ಕೆ ತಲುಪಿದ್ದೇವೆ. ಎಸ್‌ಎಸ್‌ಎಲ್‌ಸಿಯಲ್ಲಿ 17ನೇ ಸ್ಥಾನವನ್ನು ಪುನಃ ಕಾಯ್ದುಕೊಳ್ಳುವಲ್ಲಿ ಯಶ್ವಸಿಯಾಗಿದ್ದೇವೆ. ಜನತಾ ದರ್ಶನದ ಮೂಲಕ ಬಂದ 2000 ಅರ್ಜಿಯಲ್ಲಿ 1900 ಸಮಸ್ಯೆಗಳನ್ನು ಪರಿಹರಿಸಿದ್ದು, ಉಳಿದ ಅರ್ಜಿಗಳನ್ನು ಮುಂದಿನ ಹಂತದಲ್ಲಿ ಪರಿಹರಿಸಲು ಕ್ರಮವಹಿಸಲಾಗುವುದು.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ಕರ್ನಾಟಕ ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ಮಾತನಾಡಿ, ಗದಗ ಜಿಲ್ಲೆಯೊಂದಿಗೆ ಮೊದಲಿನಿಂದಲೂ ಅವಿನಾಭಾವ ಸಂಬಂಧವಿದ್ದು, ವಿದ್ಯಾರ್ಥಿ ನಾಯಕನಾಗಿದ್ದಾಗ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ ಶಿಷ್ಯ ಮತ್ತು ಅಭಿಮಾನಿಯಾಗಿದ್ದೆ ಎಂದರು.

ಗೃಹಲಕ್ಷ್ಮೀ ಯೋಜನೆಯಿಂದ ಪಡೆದ ಹಣವನ್ನು ಕೂಡಿಟ್ಟು ಬೋರ್‌ವೆಲ್ ಕೊರೆಸಿರುವ ಉದಾಹರಣೆಗಳು ಗದಗ ಜಿಲ್ಲೆಯಲ್ಲಿ ಇವೆ. ಗೃಹಲಕ್ಷ್ಮೀಯಿಂದ ಮಹಿಳೆಯರ ಸಬಲೀಕರಣವಾಗಿದೆ. ಪಂಚ ಗ್ಯಾರಂಟಿ ಯೋಜನೆಗಳು ನಿರಂತರವಾಗಿ ಮುಂದುವರೆಯಲಿವೆ ಎಂದು ನುಡಿದರು.

> ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಚುನಾವಣೆಗಳಿಗಾಗಿ ಜಾರಿಗೆ ತಂದಿರುವುದಲ್ಲ. ಬಡ ಜನರ ಏಳಿಗೆಗಾಗಿ ಬಂಗಾರಪ್ಪ, ಮೋಯ್ಲಿ ಸೇರಿದಂತೆ ಸಿದ್ಧರಾಮಯ್ಯ ಅವರು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಸರ್ಕಾರ ರಚನೆಯಾಗಿ ಮೊದಲ ಕ್ಯಾಬಿನೆಟ್‌ನಲ್ಲಿಯೇ ಪಂಚ ಗ್ಯಾರಂಟಿ ಅನುಷ್ಠಾನಗೊಳಿಸಿ ನುಡಿದಂತೆ ನಡೆದಿದ್ದೇವೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ಹೇಳಿದರು.


ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ನಾವೇನು ಗ್ಯಾರಂಟಿ ಯೋಜನೆಗಳ ವಿರೋಧಿಗಳಲ್ಲ. ಗ್ಯಾರಂಟಿ ಯೋಜನೆಯಿಂದಾಗಿ ಅಭಿವೃದ್ಧಿ ಸ್ವಲ್ಪ ಕುಂಠಿತವಾಗಿದ್ದು, ಜಿಲ್ಲೆಯ ಅಭಿವೃದ್ಧಿಗೆ ಬೇಕಾದ ಅನುದಾನವನ್ನು ಬಿಡುಗಡೆಗೊಳಿಸಿ ಎಂದು ತಿಳಿಸಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, 2–3 ತಿಂಗಳಿಂದ ಗೃಹಲಕ್ಷ್ಮೀ ಯೋಜನೆಯ ಹಣ ಬಂದಿಲ್ಲ ಎಂದು ಮಾಧ್ಯಮಗಳಲ್ಲಿ ವರದಿಗಳು ಪ್ರಸಾರವಾಗುತ್ತಿವೆ.

ಆದಷ್ಟು ಬೇಗ ಯೋಜನೆಯ ಹಣ ಬಿಡುಗಡೆಗೊಳಿಸಿ ಎಂದು ಹೇಳಿದರು. ಇದಕ್ಕೆ ಪ್ರತಿಕ್ರಿಯಸಿದ ಎಚ್.ಎಂ. ರೇವಣ್ಣ, ಗೃಹಲಕ್ಷ್ಮೀ ಯೋಜನೆಯಿಂದ ಮಹಿಳೆಯರಲ್ಲಿ ಶೇ.18ರಷ್ಟು ಖರೀದಿ ಸಾಮರ್ಥ್ಯ ಹೆಚ್ಚಾಗಿದೆ. ಜಿಡಿಪಿಯಲ್ಲಿ ಕರ್ನಾಟಕ ರಾಜ್ಯ ದೇಶದಲ್ಲಿಯೇ ಮುಂದಿದೆ ಮತ್ತು ಗ್ಯಾರಂಟಿಯಿಂದಾಗಿ ಅಭಿವೃದ್ಧಿ ಕುಂಠಿತವಾಗಿಲ್ಲ ಎಂದು ಹೇಳಿದರು.

ಈ ಸಂರ್ಭದಲ್ಲಿ ರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಎಸ್.ಎನ್. ಬಳ್ಳಾರಿ, ಎಂ.ಡಿ. ಮಕಾನದಾರ, ಪ್ರಭು ಮೇಟಿ, ಅಶೋಕ ಮಂದಾಲಿ, ಶಾರದಾ ಹಿರೇಗೌಡರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಗಣ್ಯರು, ಅಧಿಕಾರಿಗಳು ಹಾಜರಿದ್ದರು.

## ಅಕ್ರಮ ಗಣಿಗಾರಿಕೆ ಪ್ರಕರಣ: ಶಾಸಕ ಜನಾರ್ದನ ರೆಡ್ಡಿಗೆ 7 ವರ್ಷ ಶಿಕ್ಷೆ

■ ವಿಜಯಸಾಕ್ಷಿ ಸುದ್ದಿ, ಬಳ್ಳಾರಿ/ನವದೆಹಲಿ



ಓಎಂಸಿ ಅಕ್ರಮ ಗಣಿಗಾರಿಕೆ ಪ್ರಕರಣದ ತೀರ್ಪನ್ನು ಹೈದರಾಬಾದ್ ನ ಸಿಬಿಐ ನ್ಯಾಯಾಲಯ ಮಂಗಳವಾರ ಪ್ರಕಟಿಸಿದೆ. ಮಾಜಿ ಸಚಿವ ಹಾಗೂ ಹಾಲಿ ಶಾಸಕ ಜನಾರ್ದನ ರೆಡ್ಡಿ ದೋಷಿ ಎಂದು ಸಿಬಿಐ ಕೋರ್ಟ್ ತೀರ್ಪು ನೀಡಿದೆ.

ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಓಬಳಾಪುರಂನಲ್ಲಿ ನಡೆದ ಅಕ್ರಮ ಗಣಿಗಾರಿಕೆ ಕೇಸ್ ದೇಶಾದ್ಯಂತ ಸಂಚಲನ ಸೃಷ್ಟಿ ಮಾಡಿತ್ತು. ಪ್ರಕರಣದ ವಾದ – ಪ್ರತಿವಾದವನ್ನು ಆಲಿಸಿದ ಸಿಬಿಐ ನ್ಯಾಯಾಲಯವು ತೀರ್ಪು ನೀಡಿದೆ. ಬರೊಬ್ಬರಿ 13 ವರ್ಷಗಳಿಂದ ಸುದೀರ್ಘ ವಿಚಾರಣೆ ನಡೆದಿತ್ತು.

ಗಾಲಿ ಜನಾರ್ದನ ರೆಡ್ಡಿ ಸೇರಿದಂತೆ ಐವರಿಗೆ ಶಿಕ್ಷೆ ವಿಧಿಸಲಾಗಿದೆ. ಎ1 ಶ್ರೀನಿವಾಸ ರೆಡ್ಡಿ, ಎ2 ಗಾಲಿ ಜನಾರ್ದನ ರೆಡ್ಡಿ, ಎ3 ರಾಜಗೋಪಾಲ್, ಎ4 ಓಬಳಾಪುರಂ ಮೈನಿಂಗ್ ಕಂಪನಿ ಮತ್ತು ಎ7 ಅಲಿ ಖಾನ್ ದೋಷಿಗಳೆಂದು ನ್ಯಾಯಾಲಯ ತೀರ್ಪು ನೀಡಿದ್ದು, ಏಳು ವರ್ಷಗಳ ಕಾಲ ಶಿಕ್ಷೆ ವಿಧಿಸಿ ಆದೇಶ ನೀಡಿದೆ.

ಮೂರು ಸಾವಿರಕ್ಕೂ ಅಧಿಕ ದಾಖಲೆಗಳನ್ನು ಪರಿಶೀಲಿಸಲಾಗಿದೆ ಮತ್ತು 219 ಸಾಕ್ಷಿಗಳನ್ನು ವಿಚಾರಣೆ ನಡೆಸಲಾಗಿತ್ತು. ಮಾಜಿ ಸಚಿವ ಮತ್ತು ಹಾಲಿ ಗಂಗಾವತಿ ಕ್ಷೇತ್ರದ ಶಾಸಕ ಗಾಲಿ ಜನಾರ್ದನ ರೆಡ್ಡಿ, ಬಿ.ವಿ ಶ್ರೀನಿವಾಸ ರೆಡ್ಡಿ, ವಿರುದ್ಧ ಐಪಿಸಿ ಸೆಕ್ಷನ್ 120 ಬಿ, 420, 409, 468 ಮತ್ತು 471 ಹಾಗೂ ಭ್ರಷ್ಟಾಚಾರ ತಡೆ ಕಾಯ್ದೆಯ ಸೆಕ್ಷನ್ 13(2) ಜೊತೆಗೆ 13(1)(ಡಿ) ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

### ರವಿ ಗುಂಜೀಕರರ ವಯೋನಿವೃತ್ತಿ ಅಭಿನಂದನಾ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ ಆಶಯ

# ನಿವೃತ್ತಿ ನಂತರವೂ ಗುಂಜೀಕರರ ಸೇವೆ ಮುಂದುವರೆಯಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ತಮ್ಮ ಸುದೀರ್ಘ ಸೇವಾ ಅವಧಿಯಲ್ಲಿ ರವಿ ಗುಂಜೀಕರರು ನೌಕರರ–ಸಾರ್ವಜನಿಕರ ಅಪಾರ ಪ್ರೀತಿಯನ್ನ ಗಳಿಸಿದ್ದಾರೆ ಎನ್ನುವುದಕ್ಕೆ ಅವರ ನಿವೃತ್ತಿ ಸಮಾರಂಭ ಸಾಕ್ಷಿಯಾಗಿದ್ದು, ಸಮಾಜಮುಖಿ ವ್ಯಕ್ತಿತ್ವವುಳ್ಳ ರವಿ ಗುಂಜೀಕರರ ಸೇವೆ ನಿವೃತ್ತಿ ನಂತರವೂ ಮುಂದುರೆಯಲಿ ಎಂದು ಕಾನೂನು–ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ. ಪಾಟೀಲ ಆಶಿಸಿದರು.




ಅವರು ಮಂಗಳವಾರ ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮಾಜಿ ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ರವಿ ಗುಂಜೀಕರ ಅವರ ವಯೋನಿವೃತ್ತಿ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಸಾಮಾಜಿಕ ನ್ಯಾಯದ ಪರವಾಗಿ ಹೋರಾಟ ಮಾಡಿದ ರವಿ ಗುಂಜೀಕರ ತಮ್ಮ ಸೇವಾ ಅವಧಿಯಲ್ಲಿ ನೊಂದವರು–ಹಿಂದುಳಿದವರ ಆಶೋತ್ತರಗಳಿಗೆ ಸ್ಪಂದಿಸಿದ್ದಾರೆ. ಗದುಗಿನ ಸರ್ಕಾರಿ ನೌಕರರ ವೃಂದದಲ್ಲಿ ಸ್ಥಿರತೆ ಇದ್ದು, ಉಳಿದ ಜಿಲ್ಲೆಗಳ ನೌಕರ ವರ್ಗಕ್ಕಿಂತ ಭಿನ್ನವಾಗಿ ಇಲ್ಲಿನ ನೌಕರರು ಕಾರ್ಯ ನಿರ್ವಹಿಸುತ್ತಿದ್ದಾರೆ. ನೌಕರರ ಸಂಘವನ್ನು ಹಲವು ವರ್ಷಗಳ ಕಾಲ ಸಮರ್ಥವಾಗಿ ಮುನ್ನಡೆಸಿದ ಶ್ರೇಯಸ್ಸು ಗುಂಜೀಕರರಿಗೆ ಸಲ್ಲುತ್ತದೆ. ಸರ್ಕಾರಿ ಸೇವೆಯಿಂದ ನಿವೃತ್ತಿಯಾದರೆ ಸಾಮಾಜಿಕ ಜವಾಬ್ದಾರಿಗಳಿಂದ ನುಣುಚಿಕೊಳ್ಳಬೇಕಿಲ್ಲ ಎನ್ನುವುದಕ್ಕೆ ಗುಂಜೀಕರರು ನಿದರ್ಶನವಾಗಿದ್ದಾರೆ ಎಂದರು.

ರವಿ ಗುಂಜೀಕರ ಅವರ ಜೀವನ–ಸಾಧನೆಗಳುಳ್ಳ ಅಭಿನಂದನಾ ಗ್ರಂಥ 'ನೌಕರರ ನಾವಿಕ' ಬಿಡುಗಡೆಗೊಳಿಸಿದ ಕರ್ನಾಟಕ ರಾಜ್ಯ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಮಾತನಾಡಿ, ನನ್ನೊಡನೆ 13 ವರ್ಷಗಳಿಂದ ಸರ್ಕಾರಿ ನೌಕರರ ಸಂಘದ ಹಿತಕ್ಕಾಗಿ ಶ್ರಮಿಸುತ್ತಿರುವ ರವಿ ಗುಂಜೀಕರ ಸಂಘಟನೆ ಹಾಗೂ ಸರ್ಕಾರಿ ಸೇವೆ ಎರಡನ್ನೂ ಸಮರ್ಥವಾಗಿ ನಿಭಾಯಿಸಬಲ್ಲ ಚತುರರು. ಮೂರು ಬಾರಿ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಗುಂಜೀಕರ ಅವರು ಆ ಸ್ಥಾನದ ಗೌರವ ಹೆಚ್ಚುವ ಹಾಗೆ ಕೆಲಸ ಮಾಡಿದ್ದಾರೆ. ಶ್ರೀಯುತರ ಸಾರ್ಥಕ ಸೇವೆಯ ಹಿಂದೆ ಅವರ ಶ್ರೀಮತಿಯವರ ಪಾಲು ಸಹ ಸಾಕಷ್ಟಿದೆ. ಹೀಗಾಗಿ ಅವರೂ ಅಭಿನಂದನಾರ್ಹರು. ಇಷ್ಟು ದಿನಗಳ ಕಾಲ ನೌಕರರ ನಾವಿಕನಾಗಿದ್ದ ▸▸3ನೇ ಪುಟಕ್ಕೆ

> ಅಪರೂಪದ ವ್ಯಕ್ತಿತ್ವ ಹೊಂದಿರುವ ರವಿ ಗುಂಜೀಕರ ತಮ್ಮ ನಿವೃತ್ತಿಯನ್ನು ವಿಶಿಷ್ಠವಾಗಿ–ವಿಧಾಯಕವಾಗಿ ಆಚರಿಸಲು ಮನಸ್ಸು ಮಾಡಿದ್ದು ಹೊಸ ಪರಂಪರೆಗೆ ನಾಂದಿ ಹಾಡಿದೆ. ರಕ್ತದಾನ, ಪೌರಕಾರ್ಮಿಕರಿಗೆ ಸನ್ಮಾನ, ಮಹಿಳಾ ದಿನಾಚರಣೆ, ಪರಿಸರ ದಿನ ಹೀಗೆ ಏಳು ದಿನಗಳ ಕಾಲ ಸಮಾಜಮುಖಿ ಕಾರ್ಯಗಳನ್ನು ರವಿ ಗುಂಜೀಕರ ಅಭಿಮಾನಿ ಬಳಗ ಹಮ್ಮಿಕೊಂಡಿದ್ದು, ವಿಶೇಷವಾಗಿ ತಾವು ಕಲಿತ ಶಾಲೆಯನ್ನೇ ರವಿ ಗುಂಜೀಕರ ದತ್ತು ತೆಗೆದುಕೊಂಡು ಅಭಿವೃದ್ಧಿಪಡಿಸಲು ಮುಂದಾಗಿದ್ದಾರೆ.
>
> **– ಎಸ್.ವ್ಹಿ. ಸಂಕನೂರ.**
> ವಿಧಾನ ಪರಿಷತ್ ಸದಸ್ಯ.

## ಭಾರತ ಮತ್ತು ಪಾಕಿಸ್ತಾನದ ನಡುವೆ ಮುಂದುವರಿದ ಬಿಕ್ಕಟ್ಟು: ರಾಜ್ಯದ 3 ಜಿಲ್ಲೆಗಳಲ್ಲಿ ಇಂದು ಮಾಕ್ ಡ್ರಿಲ್‌ಗೆ ನಿರ್ಧಾರ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತ–ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ದಟ್ಟವಾಗಿ ಆವರಿಸುತ್ತಿದೆ. ಉಗ್ರರು ಪಹಲ್ಗಾಮ್‌ನಲ್ಲಿ 26 ಜನರ ನರಮೇಧ ಮಾಡುತ್ತಿದ್ದಂತೆ ಎರಡೂ ದೇಶಗಳ ನಡುವಿನ ಉದ್ವಿಗ್ನತೆ ಹೆಚ್ಚಾಗಿದೆ. ಜಮ್ಮು–ಕಾಶ್ಮೀರ, ಪಂಜಾಬ್, ಹರಿಯಾಣ ಸೇರಿದಂತೆ ಪಾಕಿಸ್ತಾನದ ಜೊತೆ ಗಡಿ ಹಂಚಿಕೊಂಡಿರುವ ರಾಜ್ಯಗಳ ಜಿಲ್ಲೆಗಳಲ್ಲಿ ಮಾಕ್ ಡ್ರಿಲ್ ನಡೆಯಲಿದೆ.

ಅದರ ಜೊತೆಗೆ ದೇಶದ ಪ್ರಮುಖ ವಾಣಿಜ್ಯ ನಗರ ಮತ್ತು ನೌಕಾನೆಲೆ, ಸ್ಥಾವರಗಳನ್ನು ಹೊಂದಿರುವ ಜಿಲ್ಲೆಗಳಲ್ಲೂ ಯುದ್ಧ ಕವಾಯತು ನಡೆಯುವ ಸಾಧ್ಯತೆ ಇದೆ.

ಕರ್ನಾಟಕದ ವಿಚಾರಕ್ಕೆ ಬಂದರೆ, ಮೂರು ಜಿಲ್ಲೆಗಳಲ್ಲಿ ಮಾಕ್ ಡ್ರಿಲ್ ನಡೆಯುವ ಸಾಧ್ಯತೆ ಇದೆ.

ಬೆಂಗಳೂರು, ಕಾರವಾರ ಮತ್ತು ರಾಯಚೂರಿನಲ್ಲಿ ಇಂದು ಮಾಕ್ ಡ್ರಿಲ್ ಗೆ ನಿರ್ಧರಿಸಲಾಗಿದೆ ಎಂದು ಅಗ್ನಿಶಾಮಕ ದಳದ ಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್ ಹೇಳಿದ್ದಾರೆ. ಈ ಬಗ್ಗೆ ಕೇಂದ್ರ ಸರ್ಕಾರದಿಂದ ಸುತ್ತೋಲೆ ಬರುತ್ತದೆ ಎಂದಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅಗ್ನಿಶಾಮಕ ದಳದ ಡಿಜಿಪಿ ಪ್ರಶಾಂತ್ ಕುಮಾರ್ ಠಾ–ಕೂರ್, ಬೆಂಗಳೂರು, ಕಾರವಾರ, ರಾಯಚೂರಿನಲ್ಲಿ ಬುಧವಾರ ಸಂಜೆ 4 ಗಂಟೆ ಮಾಕ್ ಡ್ರಿಲ್ ಗೆ ನಿರ್ಧಾರ ಮಾಡಿದ್ದೇವೆ. ಈ ಕುರಿತಾಗಿ ಈಗಾಗಲೇ ಅಗ್ನಿಶಾಮಕದಳ, ಸಿವಿಲ್ ಡಿಫೆನ್ಸ್ ಅಧಿಕಾರಿಗಳ ಜತೆ ಸಭೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

### ಮಹರ್ಷಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ

# ಪ್ರಯತ್ನವೇ ಯಶಸ್ಸಿಗೆ ದಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಉಪ್ಪಾರ ಸಮಾಜದಲ್ಲಿನ ವಿದ್ಯಾವಂತರು, ಶಿಕ್ಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ಅತ್ಯಂತ ಪರಿಣಾಮಕಾರಿಯಾಗಿ ಮುಟ್ಟಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.



ಜಿಲ್ಲಾಡಳಿತ ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಸಹಯೋಗದಲ್ಲಿ ರವಿವಾರ ಮಹರ್ಷಿ ಶ್ರೀ ಭಗೀರಥ ಜಯಂತಿಯ ಅಂಗವಾಗಿ ಗದಗ ಜಿಲ್ಲಾಡಳಿತ ಭವನದ ಅಡಿಟೋರಿಯಂ ಹಾಲ್‌ನಲ್ಲಿ ಮಹರ್ಷಿ ಶ್ರೀ ಭಗೀರಥರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಮಹರ್ಷಿ ಭಗೀರಥರು ತಮ್ಮ ಅಪಾರ ಪರಿಶ್ರಮದಿಂದ ಭೂಮಿಗೆ ಗಂಗೆಯ ನೀರನ್ನು ತಂದ ಮಹಾನ್ ಸಾಧಕರಾಗಿದ್ದಾರೆ. ಪ್ರಯತ್ನವೇ ಯಶಸ್ಸಿಗೆ ದಾರಿ ಎಂಬುದನ್ನು ಅವರು ಸಾಬೀತುಪಡಿಸಿದ್ದಾರೆ ಎಂದು ಹೇಳಿದರು. ಸಾಮಾಜಿಕ ಹಿನ್ನಲೆಯಲ್ಲಿ ಬೆಳೆಯುತ್ತಿರುವ ಮಕ್ಕಳಿಗೆ ಶಿಕ್ಷಣವೇ ಶಕ್ತಿ. ಅದನ್ನು ಸದುಪಯೋಗಪಡಿಸಿಕೊಂಡರೆ, ಸಮಾಜ ಮತ್ತು ದೇಶಕ್ಕೆ ದೊಡ್ಡ ಕೊಡುಗೆ ನೀಡಬಹುದಾಗಿದೆ. ನಿಮ್ಮ ಸಮಾಜವನ್ನು ಗುರುತಿಸುವಂತೆ ಆಗಬೇಕಾದರೆ ಡಾ. ಎಪಿಜೆ ಅಬ್ದುಲ್ ಕಲಾಂ, ಡಾ. ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣದ ಶಕ್ತಿ ಏನೆಂಬುದನ್ನು ನಮಗೆಲ್ಲ ತೋರಿಸಿಕೊಟ್ಟಿದ್ದಾರೆ. ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕೆಂದು ಸಂಕನೂರ ತಿಳಿಸಿದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಮಹರ್ಷಿ ಭಗೀರಥರ ವ್ಯಕ್ತಿತ್ವ ಮತ್ತು ಕೊಡುಗೆ ಕುರಿತು ಮಂಜುನಾಥ ಹುಯಿಲಗೋಳ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ಉಪ್ಪಾರ ಸಮಾಜದ ಜಿಲ್ಲಾಧ್ಯಕ್ಷ ಭೀಮನಗೌಡ ಪಾಟೀಲ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಹಿರಿಯರಾದ ಹನುಮಂತಪ್ಪ ಗರಗ, ಉಪ್ಪಾರ ಸಂಘದ ಗೌರವಾಧ್ಯಕ್ಷ ಅನಿಲ ಗರಗ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಆರ್. ಎಸ್. ಬುರುಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸೇರಿದಂತೆ ಉಪ್ಪಾರ ಸಮಾಜ ಬಾಂಧವರು ಉಪಸ್ಥಿತರಿದ್ದರು.

# ಕಾರಿಗೆ ಲಾರಿ ಡಿಕ್ಕಿ: ಐವರು ಸ್ಥಳದಲ್ಲೇ ಸಾವು




■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಭೀಕರ ರಸ್ತೆ ಅಪಘಾತದಲ್ಲಿ ಐವರು ಸ್ಥಳದಲ್ಲೇ ದುರ್ಮರಣ ಹೊಂದಿರುವ ಘಟನೆ ಹುಬ್ಬಳ್ಳಿ ತಾಲೂಕಿನ ಕಿರೇಸೂರು ಕ್ರಾಸ್ ಬಳಿ ಜರುಗಿದೆ. ಕಾರಿಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ. ಶ್ವೇತ (29), ಅಂಜಲಿ(26), ಸಂದೀಪ್ (26), ವಿಠ್ಠಲ (55) ಮತ್ತು ಶಶಿಕಲಾ ಮೃತರು.

ಇವರೆಲ್ಲರೂ ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನವರು ಎಂದು ತಿಳಿದುಬಂದಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿರುವ ಹುಬ್ಬಳ್ಳಿ ಗ್ರಾಮೀಣ ಠಾಣೆ ಪೊಲೀಸರು, ಮೃತದೇಹಗಳನ್ನು ಹುಬ್ಬಳ್ಳಿಯ ಕಿಮ್ಸ್ ಗೆ ರವಾನೆ ಮಾಡಿದರು.

ಹೋಟೆಲ್ ವ್ಯಾಪಾರಕ್ಕೆಂದು ಬಾಗಲಕೋಟೆಗೆ ತೆರಳುತ್ತಿದ್ದ ಸಮಯದಲ್ಲಿ ಈ ದುರ್ಘಟನೆ ನಡೆದಿದೆ. ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಆಸ್ತಿ ವಿಚಾರಕ್ಕೆ ಕಿರಿಕ್: ತಮ್ಮನಿಗೆ ಗುಂಡಿಕ್ಕಿ ಕೊಲೆಗೈದ ಅಣ್ಣ!

■ವಿಜಯಸಾಕ್ಷಿ ಸುದ್ದಿ, ಮಡಿಕೇರಿ

ಜಿಲ್ಲೆಯ ವಿರಾಜಪೇಟೆ ತಾಲೂಕಿನ ಅಭ್ಯತ್ ಮಂಗಲ ಗ್ರಾಮದಲ್ಲಿ ಅಣ್ಣನೇ ತಮ್ಮನಿಗೆ ಗುಂಡು ಹಾರಿಸಿ ಕೊಲೆಗೈದಿರುವ ಘಟನೆ ಜರುಗಿದೆ. ಆಸ್ತಿ ವಿಚಾರವಾಗಿ ನಡೆದ ಕಲಹ ಕೊಲೆಯಲ್ಲಿ ಅಂತ್ಯವಾಗಿದೆ. 53 ವರ್ಷದ ಕೊಳಂಬೆ ವಿನು ಬೆಳ್ಯಪ್ಪ ಮೃತ ದುರ್ದೈವಿ. ನಂಜರಾಯಪಟ್ಟಣದಲ್ಲಿ ವಾಸವಾಗಿದ್ದ ಬೆಳೆಗಾರ ಕೊಳಂಬೆ ವಿನು, ಅಭ್ಯತ್ ಮಂಗಲದಲ್ಲಿ ಹೊಂದಿರುವ ತೋಟದ ಗೋದಾಮಿನಲ್ಲಿ ಪೈಪುಗಳ ಪರಿಶೀಲನೆಗೆ ತೆರಳಿದ ಸಂದರ್ಭ ಸಹೋದರ ಮಣಿ ಹಿಂದಿನಿಂದ ಬಂದು ಗುಂಡು ಹಾರಿಸಿ ಕೊಲೆ ಮಾಡಿದ್ದಾನೆ.

ಆರೋಪಿ ಮಣಿ ಪರಾರಿಯಾಗಲು ಯತ್ನಿಸಿದ್ದು, ಪೊಲೀಸರು ಆತನನ್ನು ವಶಕ್ಕೆ ಪಡೆದಿದ್ದಾರೆ. ಅಣ್ಣ-ತಮ್ಮನ ನಡುವೆ ಹಲವು ದಿನಗಳಿಂದ ಆಸ್ತಿ ವಿಚಾರಕ್ಕೆ ಗಲಾಟೆ ನಡೆಯುತ್ತಿತ್ತು ಎಂದು ಹೇಳಲಾಗಿದೆ. ಘಟನೆ ಸಂಬಂಧಿಸಿದಂತೆ ಸ್ಥಳಕ್ಕೆ ಮಡಿಕೇರಿ ಗ್ರಾಮಾಂತರ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಮುಂದಿನ ತನಿಖೆ ಕೈಗೊಂಡಿದ್ದಾರೆ.


# ಆಂತರ್ಯದ ಸೌಂದರ್ಯಕ್ಕೆ ಬೆಲೆಯಿರಲಿ

ನೀವು ಈಗಾಗಲೇ ಒಂದು ಯಂತ್ರದಲ್ಲಿ ಇರುವ ತಾಂತ್ರಿಕ ತೊಂದರೆಯನ್ನು ನಿವಾರಿಸಲು ಓರ್ವ ಇಂಜಿನಿಯರ್ 10 ಸಾವಿರ ಡಾಲರ್‌ಗಳನ್ನು ಶುಲ್ಕವಾಗಿ ಪಡೆದ ಕಥೆಯನ್ನು ಓದಿರಬಹುದು. ಒಂದು ಡಾಲರ್ ಸ್ಕ್ರೂ ಅನ್ನು ತಿರುಗಿಸಲು 9999 ಡಾಲರ್ ಯಾವ ಸ್ಥಳದಲ್ಲಿ ತಿರುಪಿನ ಅವಶ್ಯಕತೆ ಇದೆ ಎಂಬುದನ್ನು ಗೊತ್ತು ಹಿಡಿಯಲು ಆತ ಶುಲ್ಕವನ್ನು ವಿಧಿಸಿದ.

ಮೇಲಿನ ಘಟನೆ ಕೇವಲ ದಂತ ಕಥೆಯಲ್ಲ. ಹಾಗೆ ಶುಲ್ಕ ವಿಧಿಸಿದ ವ್ಯಕ್ತಿ 1865ರಿಂದ 1973ರವರೆಗೆ ಇಂಗ್ಲೆಂಡ್ ದೇಶದಲ್ಲಿ ನೆಲೆಸಿದ್ದ ಎಲೆಕ್ಟ್ರಿಕಲ್ ಇಂಜಿನಿಯರ್ ಆಗಿದ್ದ ಚಾರ್ಲ್ಸ್ ಪ್ರೊಟೆಯಸ್ ಸ್ಟೀನ್‌ಮೆಟ್ಜ್ ಎಂಬ ವ್ಯಕ್ತಿ.

ಒಂದು ಬಾರಿ ಖ್ಯಾತ ಕಾರು ತಯಾರಿಕಾ ಕಂಪನಿ ಫೋರ್ಡ್‌ನ ರಿವರ್ ರೋಜ್ ಕಾರು ತಯಾರಿಕಾ ಘಟಕದಲ್ಲಿ ಬೃಹತ್ತಾದ ಜನರೇಟರ್ ಒಂದು ಕೆಟ್ಟು ವಿಪರೀತ ಶಬ್ದ ಹೊರಡಿಸುತ್ತಿತ್ತು. ಫೋರ್ಡ್ ಕಂಪನಿಯ ಘಟಾನುಘಟಿ ಇಂಜಿನಿಯರ್‌ಗಳಿಗೂ ಈ ತೊಂದರೆಯ ಕುರಿತು, ಜನರೇಟರಿನ ಯಾವ ಭಾಗ ಏನಾಗಿದೆ ಎಂಬುದರ ಕುರಿತು ಗೊತ್ತಾಗಲಿಲ್ಲ. ಜನರೇಟರ್ ಇಲ್ಲದೆ ಮುಂದಿನ ಕೆಲಸಕ್ಕೆ ತೊಂದರೆಯಾಗುತ್ತಿದ್ದು ಈ ಸಮಸ್ಯೆಯನ್ನು ಹೇಗೆ ಬಗೆಹರಿಸಬೇಕು ಎಂದು ಎಲ್ಲರೂ ಒದ್ದಾಡುತ್ತಿದ್ದರು. ಅಂತಿಮವಾಗಿ ಸರ್ ಹೆನ್ರಿ ಫೋರ್ಡ್ ಚಾರ್ಲ್ಸ್‌ಗೆ ಕರೆ ಕಳುಹಿಸಿದರು.

ಹಾಗೆ ಬಂದ ಚಾರ್ಲ್ಸ್ ಒಂದು ನೋಟ್ ಬುಕ್, ಒಂದು ಪೆನ್ ಮತ್ತು ಒಂದು ಮಂಚಕ್ಕಾಗಿ ಕೋರಿಕೆ ಇಟ್ಟ. ನಂತರದ ಎರಡು ದಿನ ಹಗಲು-ರಾತ್ರಿ ಆತ ಸಂಪೂರ್ಣವಾಗಿ ಆ ಪ್ಲಾಂಟ್‌ನಲ್ಲಿಯೇ ಕುಳಿತು, ಮಲಗಿ



ಆ ಜನರೇಟರ್‌ನ ಶಬ್ದವನ್ನು ಆಲಿಸುತ್ತ ತನ್ನಲ್ಲಿ ತಾನೇ ವಿಚಿತ್ರ ಲೆಕ್ಕಾಚಾರಗಳನ್ನು ಹಾಕಿಕೊಳ್ಳುತ್ತಿದ್ದ.

ಎರಡು ದಿನಗಳ ನಂತರ ಆತ ಒಂದು ಏಣಿಯನ್ನು, ಅಳತೆ ಮಾಡುವ ಟೇಪನ್ನು ಮತ್ತು ಸೀಮೆ ಸುಣ್ಣದ ಬಳಪವನ್ನು ಕೇಳಿ ಪಡೆದ. ನಂತರ ನಿಧಾನವಾಗಿ ಜನರೇಟರ್‌ನ ಮೇಲ್ಭಾಗವನ್ನು ಹತ್ತಿ ಅದರ ಮೇಲೆ ಒಂದು ಭಾಗದಲ್ಲಿ ಥ ಎಂದು ಸುಣ್ಣದ ಬಳಪದಿಂದ ಗುರುತಿಸಿದ. ನಂತರ ಅಲ್ಲಿದ್ದ ಇಂಜಿನಿಯರ್‌ಗಳತ್ತ ತೆರಳಿದ ಚಾರ್ಲ್ಸ್, ಈ ಪ್ಯಾನಲನ್ನು ತೆಗೆದು ನಾನು ಗುರುತು ಹಾಕಿರುವ ಜಾಗದಲ್ಲಿನ ಹದಿನಾರು ಸುತ್ತು ವೈರುಗಳನ್ನು ತೆಗೆದುಹಾಕಿ ಎಂದು ಹೇಳಿದ.

ಚಾರ್ಲ್ಸ್‌ನ ಮಾತಿನಂತೆ ಆತ ಹೇಳಿದ ರೀತಿಯಲ್ಲಿ ಎಲ್ಲ ಕ್ರಮವನ್ನು ಕೈಗೊಂಡ ನಂತರ ಜನರೇಟರನ್ನು ಮತ್ತೆ ಶುರು ಮಾಡಿದಾಗ ಅದು ಈ ಹಿಂದಿನಂತೆ ಸುಗಮವಾಗಿ ಕಾರ್ಯನಿರ್ವಹಿಸಲಾರಂಭಿಸಿತು.

ಕೆಲ ದಿನಗಳ ನಂತರ ಹೆನ್ರಿ ಫೋರ್ಡ್ ಅವರ ಆಫೀಸಿಗೆ ಚಾರ್ಲ್ಸ್‌ನಿಂದ ಒಂದು ಪತ್ರ ಮತ್ತು ರಿಪೇರಿ ಮಾಡಿದ ಬಾಬತ್ತು ಹತ್ತು ಸಾವಿರ ಡಾಲರ್ ಬಿಲ್ಲನ್ನು ಕಳುಹಿಸಲಾಗಿತ್ತು. ಬಿಲ್ ಹಣದ ಮೊತ್ತವನ್ನು ನೋಡಿ ಹೆನ್ರಿ ಫೋರ್ಡ್ ಚಕಿತರಾಗಿ ಅಷ್ಟೊಂದು ದೊಡ್ಡ ಮೊತ್ತದ ಬಿಲ್ ನೀಡಿರಲು ಕಾರಣವನ್ನು ಪ್ರಶ್ನಿಸಿ ಮರು ಟಪಾಲನ್ನು ಬರೆದರು.

ಸೀಮೆ ಸುಣ್ಣದಿಂದ ಗುರುತು ಮಾಡಲು ಒಂದು ಡಾಲರ್ ಮತ್ತು ಯಾವ ಸ್ಥಳದಲ್ಲಿ ಜನರೇಟರಿಗೆ ತೊಂದರೆಯಾಗಿತ್ತು ಎಂಬುದನ್ನು ಗುರುತಿಸಿ ಸರಿಯಾದ ಜಾಗವನ್ನು ಕಂಡುಹಿಡಿಯಲು 9999 ಡಾಲರ್ ಎಂದು ಚಾರ್ಲ್ಸ್ ಬರೆದು ಕಳುಹಿಸಿದ. ಯಾವುದೇ ರೀತಿಯ ವಿಚಾರಣೆ ಇಲ್ಲದೆ, ದೂರಿಲ್ಲದೆ ಏನನ್ನೂ ಪ್ರಶ್ನಿಸದೆ ನಮೂದಿಸಿದಷ್ಟು ಮೊತ್ತವನ್ನು ಚಾರ್ಲ್ಸ್‌ನ ಬ್ಯಾಂಕ್ ಖಾತೆಗೆ ಹೆನ್ರಿ ಫೋರ್ಡ್ ವರ್ಗಾಯಿಸಿದರು.

ಫೋರ್ಡ್ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ತನ್ನ ತಂದೆಯಿಂದ ಈ ದಂತ ಕಥೆಯನ್ನು ಕೇಳಿದ ಜಾಕ್ ಬಿ ಸ್ಕಾಟ್ 1965ರಲ್ಲಿ ಲೈಫ್ ಎಂಬ ಪತ್ರಿಕೆಯಲ್ಲಿ ಇದನ್ನು ಬರೆದು ಪ್ರಕಟಿಸಿದ.

ಕೇವಲ ನಾಲ್ಕು ಅಡಿ ಎತ್ತರದ, ಗೂನು ಬೆನ್ನಿನ, ವಕ್ರವಾದ ದೇಹವನ್ನು ಚಾರ್ಲ್ಸ್ ಹೊಂದಿದ್ದನು. ದೇಹದ ಆಕೃತಿಯಿಂದ ಆತನ ತಲೆಯ ಆಕಾರಕ್ಕಿಂತ ಕೈ ಕಾಲುಗಳು ತುಸು ಹೆಚ್ಚು ಉದ್ದವಾಗಿವೆ ಎಂಬಂತೆ ಭಾಸವಾಗುವ ಚಾರ್ಲ್ಸ್ ಎಂಬ ವ್ಯಕ್ತಿ ತನ್ನ ಬುದ್ಧಿಮತ್ತೆಯಲ್ಲಿ ಮಾತ್ರ ಅದ್ಭುತ ಸಾಮರ್ಥ್ಯವನ್ನು ಹೊಂದಿದ್ದ. ಖ್ಯಾತ ವಿಜ್ಞಾನಿಗಳಾದ ಅಲ್ಬರ್ಟ್ ಐನ್‌ಸ್ಟೀನ್, ನಿಕೋಲಾ ಟೆಸ್ಲಾ ಮತ್ತು ಥಾಮಸ್ ಅಲ್ವಾ ಎಡಿಸನ್ ಅವರ ಸ್ನೇಹಿತನಾಗಿದ್ದ ಚಾರ್ಲ್ಸ್ ತನ್ನ ಅಪಾರ ಬುದ್ಧಿಮತ್ತೆಯಿಂದ ಹೆಸರು ಗಳಿಸಿದ್ದ.

ನೋಡಿದಿರಾ ಸ್ನೇಹಿತರೆ! ಬುದ್ಧಿಮತ್ತೆಗೂ ದೈಹಿಕ ಅಂಗಸೌಷ್ಟವಕ್ಕೂ ಯಾವುದೇ ಸಂಬಂಧವಿಲ್ಲ. ಎಷ್ಟೋ ಬಾರಿ ಬೇರೆಯವರ ಅಂದ ಚಂದಗಳನ್ನು, ಅವರು ಧರಿಸಿರುವ ಬಟ್ಟೆಗಳನ್ನು, ಓಡಾಡುವ ವಾಹನಗಳನ್ನು ನೋಡಿ ಅವರನ್ನು ಅಳೆಯುವ ಕೆಟ್ಟ ಮನಸ್ಥಿತಿ ನಮ್ಮ ಜನರಲ್ಲಿದೆ.

ಇದನ್ನು ಅರಿತೇ ಕೆಲ ಜನರು ಮಾನಸಿಕವಾಗಿ ಅತ್ಯಂತ ಕೆಟ್ಟ ಮನಸ್ಥಿತಿಯನ್ನು ಹೊಂದಿದ್ದರೂ ತೋರಿಕೆಯ ಒಳ್ಳೆಯತನದ ಪ್ರದರ್ಶನದಿಂದ ತಮ್ಮ ಬೇಳೆ ಬೇಯಿಸಿಕೊಳ್ಳುತ್ತಾರೆ. ಆಂತರಂಗಿಕವಾಗಿ ಟೊಳ್ಳು ವ್ಯಕ್ತಿತ್ವವನ್ನು ಹೊಂದಿದ್ದರೂ ಬಹಿರಂಗದಲ್ಲಿ ದೃಢತೆ ಮತ್ತು ಹಸನ್ಮುಖತೆಯನ್ನು ತೋರುತ್ತ ಗುಳ್ಳೆ ನರಿಯಂತೆ ಆಡುತ್ತಾರೆ.

ಮಾಸಲು ಬಟ್ಟೆ ಧರಿಸಿ ಕೈ ಕಾಲುಗಳಲ್ಲಿ ಮಣ್ಣು ಮೆತ್ತಿಕೊಂಡು ಬಿಸಿಲಿನಲ್ಲಿ ದೇಹವನ್ನು ಕಪ್ಪಾಗಿಸಿ ಒಣಗಿಸಿಕೊಂಡು ನಮಗೆ ಅನ್ನ ನೀಡುವ ರೈತನನ್ನು ನಾವು ಅದೆಷ್ಟು ಗೌರವದಿಂದ ನಡೆಸಿಕೊಳ್ಳುತ್ತೇವೆ ಎಂದು ಒಂದು ಬಾರಿ ಯೋಚಿಸಿದರೆ ಸಾಕು... ನಮ್ಮ ಟೊಳ್ಳು ವ್ಯಕ್ತಿತ್ವದ ಅನಾವರಣವಾಗುತ್ತದೆ. ಶ್ರೀಮಂತರಿಗೆ ಮಣೆ ಹಾಕಿ ಗೌರವಿಸುವ, ಅವರು ತಮ್ಮ ಮನೆಗೆ ಕಾಲಿಟ್ಟದ್ದೇ ಮಹಾಭಾಗ್ಯ ಎಂಬಂತೆ ವರ್ತಿಸುವ ನಮ್ಮ ಜನ, ಬಡವರನ್ನು, ದೀನದಲಿತರನ್ನು ಕಳ್ಳರು ಸುಳ್ಳರು ಎಂಬಂತೆ ದೂರವಿರಿಸುವುದನ್ನು ನೋಡಿದಾಗ ಮನಸ್ಸು ಕಳವಳಿಸುತ್ತದೆ.

ಈ ಹಿಂದೆ ಜನರ ಇಂತಹ ಮನಸ್ಥಿತಿಯನ್ನು ಬದಲಾಯಿಸಲು ಸಾಕಷ್ಟು ಜನ ಪ್ರತಿಭಾವಂತರು ಪ್ರಯತ್ನಪಟ್ಟಿದ್ದಾರೆ. ತುಂಡು ಬಟ್ಟೆಯನ್ನು ಧರಿಸಿ ಕನ್ನಡಕ ಮತ್ತು ಕೋಲುಗಳನ್ನು ಆಸ್ತಿಯಾಗಿಸಿಕೊಂಡ

ತನ್ನ ಮೆದುವಾದ ಆದರೆ ಅಷ್ಟೇ ದೃಢವಾದ ಧೀ ಶಕ್ತಿಯಿಂದ ಬ್ರಿಟಿಷ್ ಸಾಮ್ರಾಜ್ಯವನ್ನು ನಡುಗಿಸಿದ

ಗಾಂಧೀಜಿ ನಮಗೆ ಆದರ್ಶವಾಗಬೇಕು.

ತಾವು ಉಪನ್ಯಾಸ ನೀಡಲು ಬಂದ ಭವನದ ಒಳಗೆ ತಮ್ಮ ವೇಷ ಭೂಷಣಗಳ ದೆಸೆಯಿಂದ ಮೊದಲು ಪ್ರವೇಶ ದೊರೆಯದೆ ಹೋದಾಗ ಒಳ್ಳೆಯ ವೇಷ ಭೂಷಣ ಧರಿಸಿ ಬಂದು ಉಪನ್ಯಾಸ ನೀಡಿದ ನಂತರ ಔತಣಕೂಟದಲ್ಲಿ ತಮ್ಮ ಬಟ್ಟೆಗಳಿಗೆ ಆಹಾರವನ್ನು ಸೇವಿಸಲು ಕೇಳಿಕೊಂಡ ಪಂಡಿತ್ ಈಶ್ವರ್ ಚಂದ್ರ ವಿದ್ಯಾಸಾಗರರು ಅಂದಿನ ಸೋ ಕಾಲ್ಡ್ ನಾಗರಿಕ ಸಮಾಜಕ್ಕೆ ಮಾತಿನಲ್ಲಿ ಮಾತ್ರವಲ್ಲದೇ ಕೃತಿಯ ಮೂಲಕ ತಪರಾಕಿ ನೀಡಿದ್ದರು. ಅವರ ಬದುಕು ಕೂಡ ನಮಗೆ ಆದರ್ಶವೇ ಅಲ್ಲವೇ?

ಹೊರಗಿನ ಥಳುಕಿಗಿಂತ ಆಂತರ್ಯದ ಸೌಂದರ್ಯಕ್ಕೆ ಬೆಲೆ ಕೊಡುವ ಮೂಲಕ ಗೌರವಿಸೋಣ. ಏನಂತೀರಾ ಸ್ನೇಹಿತರೆ?

**– ವೀಣಾ ಹೇಮಂತ್‌ಗೌಡ ಪಾಟೀಲ್,**
ಮುಂಡರಗಿ.

ತಾಲೂಕು ಮಟ್ಟದ ಗೃಹಲಕ್ಷ್ಮೀ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಶೋಕ ಮಂದಾಲಿ ಸೂಚನೆ

# ಗ್ಯಾರಂಟಿ ಯೋಜನೆಗಳನ್ನು ಅರ್ಹರಿಗೆ ತಲುಪಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಅಂಗನವಾಡಿ ಕಾರ್ಯಕರ್ತೆಯರು ಮನೆ ಮನೆಗೆ ತೆರಳಿ ಸರ್ವೆ ಕೈಗೊಂಡು ಸರ್ಕಾರದಿಂದ ಅನುಷ್ಠಾನಿತ ಪಂಚ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ನಗರದ ಎಸಿ ಕಚೇರಿ ಆವರಣದಲ್ಲಿ ಸೋಮವಾರ ಜರುಗಿದ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂಗನವಾಡಿ ಕಾರ್ಯಕರ್ತೆಯರು ತಮಗೆ ನೇಮಿಸಿದ ಮನೆಗಳಿಗೆ ಹೋಗಿ ಸರ್ವೆ ಮಾಡಿ ಸರ್ಕಾರದಿಂದ ಅನುಷ್ಠಾನಿತ ಪಂಚ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿರುವ ಬಗ್ಗೆ ಪರಿಶೀಲನೆ ಮಾಡಬೇಕು. ಗ್ಯಾರಂಟಿ ಯೋಜನೆಗಳು ಇನ್ನೂ ತಲುಪದಿದ್ದಲ್ಲಿ, ತಲುಪದೇ ಇರಲು ಕಾರಣವನ್ನು ಕಂಡುಹಿಡಿದು ಪರಿಶೀಲಿಸಿ, ಅದಕ್ಕೆ ಪರಿಹಾರವನ್ನು ಕಲ್ಪಿಸಿ ಅರ್ಹರಿಗೆ ಯೋಜನೆಗಳನ್ನು ತಲುಪಿಸಬೇಕು ಎಂದು ಅವರು ಹೇಳಿದರು.




> ಗೃಹಲಕ್ಷ್ಮೀ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಅಂಗನವಾಡಿ ಮೇಲ್ವಿಚಾರಕಿಯರು, ಸುಪರ್‌ವೈಸರ್ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಸಭೆ ಕರೆದು ಸರ್ವೆ ಕಾರ್ಯ ಚುರುಕುಗೊಳಿಸಬೇಕು.
> **– ಕೃಷ್ಣಗೌಡ ಎಚ್.ಪಾಟೀಲ.**
> ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರು.

ಅನ್ನಭಾಗ್ಯ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಆಹಾರ ಇಲಾಖೆಯ ಅಧಿಕಾರಿಗಳು ಪಡಿತರ ಅಂಗಡಿದಾರರ ಜೊತೆಗೆ ಸಭೆ ನಡೆಸಬೇಕು. ಅನ್ನಭಾಗ್ಯ ಅಕ್ಕಿಯು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಈ ಹಿಂದೆ ರೇಶನ್ ಕಾರ್ಡ್‌ಗಳು ಇರದೇ ಇರದಿರುವವರಿಗೆ ಗ್ಯಾರಂಟಿ ಯೋಜನೆಗಳು ತಲುಪಿಲ್ಲ. ಈಗ ರೇಶನ್ ಕಾರ್ಡ್‌ಗಳನ್ನು ಪ್ರಾರಂಭಿಸಿದ್ದು, ಅದರ ಕಾಲಾವಧಿಯನ್ನು ಜನರಿಗೆ ತಿಳಿಯುವಂತೆ ಜಾಗೃತಿ ವಹಿಸಬೇಕು ಎಂದು ಸೂಚಿಸಿದರು.

> ಜಿಎಸ್‌ಟಿ ಇರುವ ಕಾರಣದಿಂದ ಪಂಚ ಗ್ಯಾರಂಟಿ ಯೋಜನೆಗಳಿಂದ ವಂಚಿತರಾದ ಅರ್ಹರು ತಮ್ಮ ರೇಶನ್ ಕಾರ್ಡ್, ಆಧಾರ್ ಮತ್ತು ಪ್ಯಾನ್ ಕಾರ್ಡ್‌ಗಳೊಂದಿಗೆ ಎಸಿ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕಛೇರಿಗೆ ಸಂಪರ್ಕಿಸಿ ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯಬೇಕು.
> **–ಅಶೋಕ ಮಂದಾಲಿ.**
> ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ತಾಲೂಕಾಧ್ಯಕ್ಷರು.

ಇಲಾಖೆ ಅಧಿಕಾರಿಗಳು ಗ್ಯಾರಂಟಿ ಯೋಜನೆಯ ಪ್ರಗತಿಯ ಕುರಿತು ನಿಖರ ಮಾಹಿತಿ ಒದಗಿಸಬೇಕು. ವ್ಯಾಪಾರಕ್ಕಾಗಿ ಜಿಎಸ್‌ಟಿಯನ್ನು ಪ್ರಾರಂಭಿಸಿ ನಂತರ ಅದನ್ನು ರದ್ದುಗೊಳಿಸಿದ್ದರೆ ಮಾತ್ರ ಗೃಹಲಕ್ಷ್ಮೀ ಯೋಜನೆ ಬರುತ್ತದೆ. ಹಾಗಾಗಿ ಗದಗ ತಾಲೂಕಿನಲ್ಲಿ ಜಿಎಸ್‌ಟಿಯಿಂದ ವಂಚಿತರಾದವರನ್ನು ಪತ್ತೆ ಹಚ್ಚಿ ಅವರ ಸಮಸ್ಯೆಗಳನ್ನು ಪರಿಹರಿಸಬೇಕು ಹಾಗೂ ಯುವ ನಿಧಿ ಯೋಜನೆಯ ಕುರಿತು ಇನ್ನೂ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಅಶೋಕ ಮಂದಾಲಿ ತಿಳಿಸಿದರು.

ಗದಗ ತಾಲೂಕಿನಲ್ಲಿ 533 ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳು ಮರಣ ಹೊಂದಿದ್ದು, ಸಂಬಂಧಿಸಿದ ಅಂಗನವಾಡಿ ಕಾರ್ಯಕರ್ತೆಯರು ಮರಣಪತ್ರ ತೆಗೆದುಕೊಂಡು ಅವರ ಹೆಸರನ್ನು ಕಡಿಮೆ ಮಾಡಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯಡಿ ಇದುವರೆಗೆ ಗದಗ ತಾಲೂಕಿನಲ್ಲಿ 77823 ನೋಂದಣಿಯಾದ ಅರ್ಜಿಗಳ ಪೈಕಿ 76521 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. 76521 ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ಪಾವತಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಗದಗ ತಾಲೂಕಿನಲ್ಲಿ ಪಡಿತರ ಪ್ರದೇಶದಲ್ಲಿ 24,428 ಬಿಪಿಎಲ್ ಕಾರ್ಡುದಾರರಿಗೆ ಹಾಗೂ 46,057 ಬಿಪಿಎಲ್ ಕಾರ್ಡುದಾರರಿಗೆ 74,485 ಡಿ.ಬಿ.ಟಿ.ಮೂಲಕ ಹಣ ಸಂದಾಯ ಮಾಡಿದೆ. ಫಲಾನುಭವಿಗಳಿಗೆ 4,02,27,440 ರೂ.ಗಳನ್ನು ಡಿಬಿಟಿ ಮೂಲಕ ಹಣ ಸಂದಾಯ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆಯಡಿ ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಿದ್ದು, 52909 ಸ್ಥಾವರಗಳ ನೋಂದಣಿಯಾಗಿ ಶೇ. 99.33ರಷ್ಟು ಪ್ರಗತಿಯಾಗಿದೆ. ಗದಗ ಶಹರ ಉಪವಿಭಾಗದಲ್ಲಿ 46483 ಸ್ಥಾವರಗಳು ಅರ್ಹವಾಗಿದ್ದು, 46235 ಸ್ಥಾವರಗಳ ನೋಂದಣಿಯಾಗಿ ಶೇ. 99.47 ಪ್ರಗತಿಯಾಗಿದೆ. ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ 1704 ಫಲಾನುಭವಿಗಳ ನೋಂದಣಿಯಾಗಿದ್ದು, 826 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ 24,57,000 ರೂ. ವರ್ಗಾವಣೆಯಾಗಿದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು. ಸಭೆಯಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಸಂಗು ಕರಕಲಮಟ್ಟಿ, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಿತ ಅಧಿಕಾರಿಗಳು ಹಾಜರಿದ್ದರು.

ಪಾಕಿಸ್ತಾನಿ ಅಕ್ರಮ ನುಸುಳುಕೋರರ ಗಡಿಪಾರಿಗೆ ಜಿಲ್ಲಾ ಬಿಜೆಪಿ ಆಗ್ರಹ

# ದೇಶದ ಜನತೆ ಒಗ್ಗಟ್ಟಿನಿಂದ ನಿಲ್ಲಬೇಕಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಶ್ಮೀರ ಹತ್ಯಾಕಾಂಡದ ನಂತರ ಪಾಕಿಸ್ತಾನಾದ ಪ್ರಜೆಗಳನ್ನ ದೇಶದಿಂದ ಹೊರಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಂಡ ಕೇಂದ್ರ ಸರ್ಕಾರದ ಸೂಚನೆಗಳನ್ನ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರಗಳು ಸರಿಯಾಗಿ ಪಾಲಿಸದಿರುವದನ್ನು ಗದಗ ಜಿಲ್ಲಾ ಬಿಜೆಪಿ ಖಂಡಿಸಿದೆ.

ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿದ ಜಿಲ್ಲಾ ಬಿಜೆಪಿ ಪದಾಧಿಕಾರಿಗಳು, ಭಾರತದಲ್ಲಿ ಅಶಾಂತಿ ಹಾಗು ಅಸ್ಥಿರತೆ ಸೃಷ್ಟಿಗೆ ಪಾಕಿಸ್ತಾನ ಯಾವಾಗಲೂ ಪ್ರಯತ್ನಿಸುತ್ತಲೇ ಇರುವದು ಜಗತ್ತಿಗೆ ಗೊತ್ತಿರುವ ವಿಚಾರ. ಆದರೂ, ನೆರೆ ರಾಷ್ಟ್ರದ ಜೊತೆಗೆ ಒಳ್ಳೆಯ ಬಾಂಧವ್ಯ ಇರಲಿ ಅನ್ನುವ ಕಾರಣಕ್ಕಾಗಿ ಬಿಜೆಪಿ ನೇತೃತ್ವದ ಅಟಲ್ ಬಿಹಾರಿ ವಾಜಪೇಯಿ, ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರಗಳು ಸಹಯೋಗ ನೀಡುತ್ತ ಬಂದಿದ್ದವು.



ಆದರೂ ತನ್ನ ಕುಟಿಲ ನೀತಿಯನ್ನ ಬಿಡದಿರುವ ಪಾಕಿಸ್ತಾನಕ್ಕೆ ಬುದ್ಧಿ ಕಲಿಸುವ ಕಾಲ ಈಗ ಕೂಡಿಬಂದಿದ್ದು, ದೇಶದ ಜನತೆ ಒಗ್ಗಟ್ಟಿನಿಂದ ನಿಲ್ಲಬೇಕಾಗಿದೆ ಎಂದರು.

> ಈಗಾಗಲೇ ಪಾಕಿಸ್ತಾನದ ಜೊತಗಿನ ಎಲ್ಲಾ ರಾಜತಾಂತ್ರಿಕ ಸಂಬಂಧಗಳನ್ನು ಸ್ಥಗಿತಗೊಳಿಸಿದ ಕೇಂದ್ರ ಸರ್ಕಾರ ಅಕ್ರಮ ವಲಸಿಗರನ್ನ ಕೂಡಲೇ ದೇಶ ಬಿಟ್ಟು ಹೋಗುವಂತೆ ಕಠಿಣ ಕ್ರಮ ಕೈಗೊಂಡಿದ್ದು, ಗದಗ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿರುವ ಅಕ್ರಮ ಪಾಕಿಸ್ತಾನಿ ಪ್ರಜೆಗಳನ್ನ ಗುರುತಿಸಿ ಗಡಿಪಾರು ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಹಿರಿಯರಾದ ಎಂ.ಎಸ್. ಕರಿಗೌಡ್ರ, ಶ್ರೀಪತಿ ಉಡುಪಿ, ಬಿ.ಎಸ್. ಚಿಂಚಲಿ, ಪ್ರಮುಖರಾದ ಅನಿಲ ಅಬ್ಬಿಗೇರಿ, ಭದ್ರೇಶ ಕುಸ್ಲಾಪೂರ, ಸಿದ್ದು ಪಲ್ಲೇದ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ಅಪ್ಪಣ್ಣ ಟೆಂಗಿನಕಾಯಿ, ಅಶೋಕ ಸಂಕಣ್ಣವರ, ಸುಧೀರ ಕಾಟಿಗರ, ಶಶಿಧರ ದಿಂಡೂರ, ಭಿಮಸಿಂಗ ರಾಠೋಡ, ವಾಯ್.ಪಿ. ಅಡ್ನೂರ, ಶಂಕರ ಕರಿಬಿಷ್ಠಿ, ಮಂಜುನಾಥ ತಳವಾರ, ಮೇಘರಾಜ ನಾಯಕ, ಅಪ್ಪು ಕೊಟಗಿ, ಬಸವರಾಜ ಹಡಪದ, ಶಂಕರ ಮಲ್ಲಸಮುದ್ರ, ಪಂಚಾಕ್ಷರಿ ಅಂಗಡಿ, ಡಿ.ಬಿ.ಕರೀಗೌಡ್ರ, ಮುತ್ತಣ್ಣ ಮುಶಿಗೇರಿ, ನಾಗರಾಜ ತಳವಾರ, ಶಂಕರ ಕಾಕಿ, ಮಾಂತೇಶ ಬಾತಾಖಾನಿ, ಶರಣು ಬರಶೆಟ್ಟಿ, ಹುಲ್ಲಪ್ಪ ಕೆಂಗಾರ, ಅರವಿಂದ ಅಣ್ಣಿಗೇರಿ, ನವೀನ ಕುರ್ತಕೋಟಿ, ಬಸವರಾಜ ನರೆಗಲ್, ವಸಂತ ಹಬೀಬ, ಕಾರ್ತಿಕ ಶಿಗ್ಲಿಮಠ, ದೇವೆಂದ್ರಪ್ಪ ಹೂಗಾರ, ಸಂಜೀವ ಖಟವಟೆ, ಚಂದ್ರಕಾಂತ ಜೈನರ್, ಮೋಹನ ಕೋರಿ, ವಿನೋದ ಹಂಸನೂರ ಮುಂತಾದವರಿದ್ದರು.

# ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಸಾಧನೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಡಂಬಳ ಹೋಬಳಿಯ ಕದಾಂಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಪ್ರಥಮ-ಈರಮ್ಮ ಧರ್ಮಪ್ಪ ಬಳ್ಳಾರಿ ಶೇ.91.46, ದ್ವಿತೀಯ-ಮೇಘಾ ಈರಪ್ಪ ಹಳ್ಳಿ ಶೇ.90.88, ತೃತೀಯ-ಶ್ರೀದೇವಿ ಯಲ್ಲಪ್ಪ ತಂಗಡಗಿ ಶೇ.89.92, ರಂಜಿತಾ ರಾಜೇಶ ಬರದೂರ-ಶೇ.86.88, ನವೀನಾ ಮಲ್ಲಪ್ಪ ತಳಗಡೆ-ಶೇ.89.76, ಲಕ್ಷ್ಮೀ ಶಿವಪ್ಪ ಬಳ್ಳಾರಿ-ಶೇ.89.44 ಅಂಕ ಪಡೆದುಕೊಂಡಿದ್ದಾರೆ. ಸಾಧಕ ವಿದ್ಯಾರ್ಥಿಗಳನ್ನು ಶಾಲಾ ಎಸ್‌ಡಿಎಂಸಿ ಪದಾಧಿಕಾರಿಗಳು, ಮುಖ್ಯೋಪಾಧ್ಯಾಯರು, ಗುರುವೃಂದ, ಗ್ರಾಮದ ಶಿಕ್ಷಣ ಪ್ರೇಮಿಗಳು, ಹಿರಿಯರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



# ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನಕದಾಸ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆಯಾದ ತಿಮ್ಮಾಪೂರದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಭೀಮವ್ವ ಜೋಗಿನ (ಶೇ. 84.8) ಪ್ರಥಮ ಸ್ಥಾನ, ಪವಿತ್ರಾ ಸತ್ಯಪ್ಪನವರ (ಶೇ. 80.4) ದ್ವಿತೀಯ ಸ್ಥಾನ, ಅಶ್ವಿನಿ ಬಿಚಗಲ್ಲ (ಶೇ. 78.8) ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.



ಸಂಸ್ಥೆಯ ಅಧ್ಯಕ್ಷರಾದ ಡಾ. ಬಿ.ಎಫ್. ದಂಡಿನ, ಕಾರ್ಯದರ್ಶಿ ರವೀಂದ್ರನಾಥ ದಂಡಿನ, ಸಹ ಕಾರ್ಯದರ್ಶಿ ಪುನೀತ್ ಬೆನಕನವಾರಿ, ಪ್ರಾಚಾರ್ಯ ವೀರಣ್ಣ ಕಮತರ, ಮುಖ್ಯೋಪಾಧ್ಯಾಯ ಆರ್.ಪಿ. ಕುರಡಗಿ, ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಮತ್ತು ಶಾಲೆಯ ಎಲ್ಲಾ ಶಿಕ್ಷಕರು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಸಡಗರ ಸಂಭ್ರಮದಿಂದ ಅನ್ನದಾನೇಶ್ವರ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿ ಗ್ರಾಮದ ಅನ್ನದಾನೇಶ್ವರ ಮಠದ ಜಾತ್ರಾ ಮಹೋತ್ಸವ ನಿಮಿತ್ತ ಜರುಗಿದ ಮಹಾರಥೋತ್ಸವವು ಅತ್ಯಂತ ಸಡಗರ ಸಂಭ್ರಮದಿಂದ ಜರುಗಿತು.

ಹಾಲಕೆರೆಯ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ ರಥೋತ್ಸವಕ್ಕೆ ಚಾಲನೆ ನೀಡಿದರು.

ಸಹಸ್ರಾರು ಭಕ್ತರು ಸಮ್ಮುಖದಲ್ಲಿ ಭಜನೆ, ಡೊಳ್ಳು, ಆರತಿ ಸೇರಿದಂತೆ ಸಕಲ ವಾದ್ಯ ಮೇಳದೊಂದಿಗೆ ರಥೋತ್ಸವ ಸಾಗಿತು. ಅನ್ನದಾನೇಶ್ವರ ಮಹಾರಾಜ್ ಕೀ ಜೈ ಎಂದು ಘೋಷಣೆ ಕೂಗಿ ಸಂಭ್ರಮಿಸಿದರು.

ಕೊಪ್ಪಳ, ಬಾಗಲಕೋಟಿ, ಹುಬ್ಬಳ್ಳಿ, ರೋಣ, ಗದಗ, ನರೇಗಲ್ಲ, ಕೋಟುಮಚಗಿ, ಕುರಡಗಿ, ಯರೇಬೇಲೇರಿ, ನಾಗರಾಳ, ಗುಜಮಾಗಡಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಭಕ್ತರು ಆಗಮಿಸಿದ್ದರು.

### ರವಿ ಗುಂಜೀಕರ ನಿವೃತ್ತಿ ಅಂಗವಾಗಿ ಸರ್ಕಾರಿ ಶಾಲೆ ದತ್ತು ಸ್ವೀಕಾರ ಕಾರ್ಯಕ್ರಮ

# ಗುಂಜೀಕರರಲ್ಲಿ ಚುನಾಯಿತ ಪ್ರತಿನಿಧಿಗಳ ಬದ್ಧತೆಯಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾನ್ಯವಾಗಿ ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಅಭಿವೃದ್ಧಿಗೊಳಿಸುವಂತೆ ಸರ್ಕಾರಗಳು ಚುನಾಯಿತ ಪ್ರತಿನಿಧಿಗಳಿಗೆ ನಿರ್ದೇಶನ ನೀಡುತ್ತವೆ. ಆದರೆ ಓರ್ವ ನಿವೃತ್ತ ಸರ್ಕಾರಿ ಅಧಿಕಾರಿಗಳಾಗಿ ಈ ಕಲ್ಯಾಣಕಾರ್ಯಕ್ಕೆ ಮುಂದಾಗಿರುವ ರವಿ ಗುಂಜೀಕರರಲ್ಲಿ ಚುನಾಯಿತ ಪ್ರತಿನಿಧಿಗಳ ಕರ್ತವ್ಯಬದ್ಧತೆಯನ್ನು ಕಾಣಬಹುದಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ನುಡಿದರು.

ಅವರು ಸೋಮವಾರ ಇಲ್ಲಿನ ವೀರನಾರಾಯಣ ದೇವಸ್ಥಾನದ ಹತ್ತಿರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮಾಜಿ ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ರವಿ ಗುಂಜೀಕರರ ನಿವೃತ್ತಿ ಅಂಗವಾಗಿ ಅವರು ಪ್ರಾಥಮಿಕ ಶಿಕ್ಷಣ ಪೂರೈಸಿದ ಸರ್ಕಾರಿ ಹಿರಿಯ ಕನ್ನಡ ಗಂಡುಮಕ್ಕಳ ಶಾಲೆ ನಂ.2ರ ದತ್ತು ಸ್ವೀಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರವಿ ಗುಂಜೀಕರ ಮಾತನಾಡಿ, ಇದೇ ಶಾಲೆಯಲ್ಲಿ ನನ್ನ ಸಹಪಾಠಿಯಾಗಿದ್ದ ಅರುಣಕುಮಾರ ಚವ್ಹಾಣ ಈಗ ಉತ್ತಮ ಉದ್ದಿಮೆದಾರನಾಗಿ ಬೆಳೆದಿದ್ದು ನಾವಿಬ್ಬರೂ ಕೂಡಿ ಈ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಅಭಿವೃದ್ಧಿಗೊಳಿಸುವ ಯೋಜನೆ ಹಾಕಿಕೊಂಡಿದ್ದೇವೆ. ಸರ್ಕಾರಿ ಶಾಲೆಗಳ ಅಭಿವೃದ್ಧಿಯಲ್ಲಿ ಸರ್ಕಾರದ ಜೊತೆಗೆ ಸಮುದಾಯದ ಪಾತ್ರ ಮುಖ್ಯವಾಗಿದ್ದು, ಇಂಥ ಸಾಮಾಜಿಕ ಕಾರ್ಯಗಳ ಮೂಲಕ ನನ್ನ ನಿವೃತ್ತಿ ಸಾರ್ಥಕವಾಗಿದೆ ಎಂದರು.

ಸರ್ಕಾರಿ ನೌಕರರ ಸಾಂಕೇತಿಕ ನಿವೃತ್ತಿ ಕಾರ್ಯಕ್ರಮಗಳನ್ನು ಸಾಕಷ್ಟು ನೋಡಿದ್ದೇನೆ. ಆದರೆ ರವಿ ಗುಂಜೀಕರರಂತೆ ತಮ್ಮ ನಿವೃತ್ತಿಯನ್ನು ಸಾಮಾಜಿಕ ಕಾರ್ಯಕ್ರಮಗಳ ಮೂಲಕ ಸಾರ್ಥಕಗೊಳಿಸಿದ ನಿದರ್ಶನಗಳು ಇದ್ದಂತಿಲ್ಲ. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ನೌಕರರು ಮೇಲಧಿಕಾರಿಗಳ, ಸಾರ್ವಜನಿಕರ ಹಾಗೂ ಚುನಾಯಿತ ಪ್ರತಿನಿಧಿಗಳ ಒತ್ತಡದಿಂದ ಬೇಸತ್ತು ನಿವೃತ್ತಿಯಾದರೆ ಸಾಕೆಂಬ ಮನೋಭಾವ ತಲುಪಿದ್ದಾರೆ. ಇಂಥ ಸಂದಿಗ್ಧ ಸ್ಥಿತಿಯಲ್ಲಿ ಒಂದೂ ಕಪ್ಪುಚುಕ್ಕೆಯಿಲ್ಲದಂತೆ ವೃತ್ತಿ ಬದುಕನ್ನು ಪೂರೈಸಿ ನಿವೃತ್ತಿಯಲ್ಲೂ ಮಾದರಿಯಾಗಿರುವ ರವಿ ಗುಂಜೀಕರರ ನಿವೃತ್ತಿ ಜೀವನ ಸಮಾಜಮುಖಿಯಾಗಿರಲಿ ಎಂದು ಹಾರೈಸಿದರು.

ಹಿರಿಯರಾದ ಜಿ.ಎಸ್. ಹಿರೇಮಠ ಮಾತನಾಡಿ, ಇಲ್ಲಿ ಹೆಣ್ಣಮಕ್ಕಳ ಹಾಗೂ ಗಂಡುಮಕ್ಕಳ ಶಾಲೆಗಳು ಪ್ರತ್ಯೇಕವಾಗಿ ನಡೆಯುತ್ತಿದ್ದು, ಎರಡೂ ಬಡಮಕ್ಕಳ ಶಾಲೆಗಳಾಗಿವೆ. ರವಿ ಗುಂಜೀಕರ ಅವರು ಎರಡೂ ಶಾಲೆಗಳ ಅಭಿವೃದ್ಧಿಗೂ ನೆರವಾಗಬೇಕು ಎಂದು ಮನವಿ ಮಾಡಿದರು.

ಶಾಲಾ ಶಿಕ್ಷಕರ ಸಂಘಟನೆಗಳು ಹಾಗೂ ಗಂಡುಮಕ್ಕಳ ಸರ್ಕಾರಿ ಶಾಲೆ ನಂ.2ರ ವತಿಯಿಂದ ರವಿ ಗುಂಜೀಕರ ಹಾಗೂ ನೂತನ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಬಸವರಾಜ ಬಳ್ಳಾರಿ ಅವರನ್ನು ಸನ್ಮಾನಿಸಲಾಯಿತು.

ಚಾಂದಸಾಬ ಕೊಟ್ಟೂರ ಹಾಗೂ ಶಾಲಾ ವಿದ್ಯಾರ್ಥಿಗಳ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ನಗರಸಭೆ ಸದಸ್ಯೆ ಮುಲ್ಲಾ, ಅರುಣಕುಮಾರ ಚವ್ಹಾಣ, ವಿ.ಎಂ. ಹಿರೇಮಠ, ಗ್ರಾಮೀಣ ಬಿಇಓ ನಡುವಿನಮನಿ, ಕಾಸಿಮಸಾಬ ತಹಸೀಲ್ದಾರ, ಆರ್.ವ್ಹಿ. ಸಂಕಣ್ಣವರ, ಉಮೇಶ ಹಿರೇಮಠ, ಸುರೇಶ ಕೊಪ್ಪದ, ಶಿವಯೋಗಿ ಬಂಡಿ, ಶಾಲೆಯ ಪ್ರಧಾನ ಶಿಕ್ಷಕಿ ಎಫ್.ಎ. ದಲಬಂಜನ, ಪಿ.ಎ. ಕಣಾಜ, ಐ.ಕೆ. ಕಮ್ಮಾರ ಸೇರಿದಂತೆ ರವಿ ಗುಂಜೀಕರ ಅಭಿಮಾನಿಗಳು ಹಾಜರಿದ್ದರು.

ತಾವು ಕಲಿತ ಶಾಲೆಯನ್ನು ಬಹುತೇಕರು ಮರೆತುಹೋಗುವುದು ಸಹಜ. ಆದರೆ ಇದಕ್ಕೆ ವ್ಯತಿರಿಕ್ತವಾಗಿ ರವಿ ಗುಂಜೀಕರರು ವಿದ್ಯೆ ಕಲಿತ ಶಾಲೆಯನ್ನೇ ದತ್ತು ತೆಗೆದುಕೊಂಡು ಅದರ ಏಳಿಗೆಗೆ ಮುಂದಾಗಿದ್ದಾರೆ. ತಾವು ಕಲಿಯುವಾಗ ಅನೇಕ ಕೊರತೆಗಳನ್ನು ಎದುರಿಸಿದ್ದ ರವಿ ಅವರು ಈಗ ಈ ಶಾಲೆಯಲ್ಲಿ ಕಲಿಯುವ ಮಕ್ಕಳಿಗೆ ಯಾವುದೇ ಕೊರತೆ ಉಂಟಾಗದಂತೆ ಶಾಲೆಯ ಸರ್ವಾಂಗೀಣ ಪ್ರಗತಿಯ ಕನಸು ಹೊತ್ತಿದ್ದಾರೆ.

**– ಎಸ್.ಆರ್. ಹಿರೇಮಠ,**
ರವಿ ಗುಂಜೀಕರ ಅಭಿಮಾನಿ ಬಳಗದ ಉಪಾಧ್ಯಕ್ಷ.

# ನಿವೃತ್ತಿ ನಂತರವೂ ಗುಂಜೀಕರರ ಸೇವೆ ಮುಂದುವರೆಯಲಿ

▶▶ಮೊದಲನೇ ಪುಟದಿಂದ

ಸಾನ್ನಿಧ್ಯ ವಹಿಸಿದ್ದ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಕಲ್ಲಯ್ಯಜ್ಜನವರು ಆಶೀರ್ವಚನ ನೀಡಿ, ಸರ್ಕಾರಿ ನೌಕರರ ಪ್ರತಿನಿಧಿಯಾಗಿ ಅವರ ಮನದಲ್ಲಿ ಶಾಶ್ವತ ಸ್ಥಾನ ಪಡೆದಿರುವ ರವಿ ಗುಂಜೀಕರ ಅವರು ತಮ್ಮ ಸೇವಾ ಅವಧಿಯಲ್ಲಿ ಬಡವರ ಬಂಧುವಾಗಿ ಕೆಲಸ ಮಾಡಿದ್ದಾರೆ. ಬಡ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಅಗತ್ಯ ಇದ್ದಾಗ ಗುಂಜೀಕರ ಹಾಗೂ ಬಸವರಾಜ ಬಳ್ಳಾರಿಯವರು ಎಂದೂ ಅವರನ್ನು ನಿರಾಸೆಗೊಳಿಸಿಲ್ಲ. ರವಿ ಗುಂಜೀಕರರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಆಶೀರ್ವದಿಸಿದರು.

ರವಿ ಗುಂಜೀಕರ ಇನ್ನು ಮುಂದೆ ಸಮಾಜದ ನಾವಿಕನಾಗಿ ಕಾರ್ಯನಿರ್ವಹಿಸಲಿ ಎಂದು ಆಶಿಸಿದರು.

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ 60 ಜನ ಸಾಧಕರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಗಂಧರ್ವ ಇವೆಂಟ್ಸ್‌ನವರು ತಯಾರಿಸಿದ ರವಿ ಗುಂಜೀಕರ ಅವರ ಜೀವನ-ಸಾಧನೆಗಳ ಸಂಕ್ಷಿಪ್ತ ಪರಿಚಯ ನೀಡುವ ಸಾಕ್ಷ್ಯಚಿತ್ರ ಪ್ರದರ್ಶನಗೊಂಡಿತು.

ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ಡಾ. ರವಿ ಗುಂಜೀಕರರಿಗೆ ಬೆಳ್ಳಿ ಕಿರೀಟ ತೊಡಿಸಿ ಸನ್ಮಾನಿಸಲಾಯಿತು. ಜಿಲ್ಲಾ ಭೋವಿ ವಡ್ಡರ್ ಸಮಾಜದ ಸದಸ್ಯರು ಗುಂಜೀಕರ್ ದಂಪತಿಗೆ ಬೆಳ್ಳಿ ಗದೆ ನೀಡಿ ನಿವೃತ್ತಿ ಜೀವನಕ್ಕೆ ಶುಭ ಹಾರೈಸಿದರು.

ಅಡ್ನೂರು-ರಾಜೂರು ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಓಂಕಾರಗಿರಿಯ ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಕಪ್ಪತಗುಡ್ಡ ನಂದಿವೇರಿ ಮಠದ ಶಿವಕುಮಾರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ವೇದಿಕೆ ಮೇಲೆ ಮಾಜಿ ಸಚಿವ ಹಾಗೂ ನರಗುಂದ ಶಾಸಕ ಸಿ.ಸಿ. ಪಾಟೀಲ, ಶಾಸಕರು ಹಾಗೂ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್. ಪಾಟೀಲ, ಶಾಸಕರಾದ ಚಂದ್ರು ಲಮಾಣಿ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ವಾಸಣ್ಣ ಕುರಡಗಿ, ರಾಜು ಕುರಡಗಿ, ಎಸ್.ಎನ್. ಬಳ್ಳಾರಿ, ಮಲ್ಲಿಕಾರ್ಜುನ ಬಳ್ಳಾರಿ, ಐ.ಕೆ. ಕಮ್ಮಾರ, ಅರುಣಕುಮಾರ ಹಿರೇಮಠ ಸೇರಿದಂತೆ ರವಿ ಗುಂಜೀಕರ ಅಭಿಮಾನಿ ಬಳಗದ ಪದಾಧಿಕಾರಿಗಳು ಹಾಗೂ ಆತ್ಮೀಯರು ಪಾಲ್ಗೊಂಡಿದ್ದರು.

# ಕರ್ನಾಟಕ ಅಪರಾಧಿಗಳ ರಾಜ್ಯವಾಗುತ್ತಿದೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಪ್ರತಿನಿತ್ಯ ಒಂದೆರಡಾದರೂ ಕೊಲೆಗಳು ನಡೆಯುತ್ತಿವೆ. ಕರ್ನಾಟಕದಲ್ಲಿ ರಾಜ್ಯ ಸರಕಾರ ಬದುಕಿದೆಯೇ ಅಥವಾ ಸತ್ತಿದೆಯೇ ಎಂಬ ಸಂಶಯ ಕೇವಲ ನಮ್ಮ ರಾಜ್ಯದ ಜನರಿಗೆ ಅಲ್ಲ, ನಾವು ಯಾವ ರಾಜ್ಯಕ್ಕೆ ಹೋದರೂ ಕೂಡ 'ನಿಮ್ಮ ರಾಜ್ಯಕ್ಕೆ ಏನಾಗಿದೆ?' ಎಂಬ ಪ್ರಶ್ನೆ ಕೇಳುತ್ತಿದ್ದಾರೆ ಎಂದು ಬೆಂಗಳೂರು ಉತ್ತರ ಸಂಸದೆ ಮತ್ತು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಕರ್ನಾಟಕವು ಅಪರಾಧಿಗಳ ರಾಜ್ಯವಾಗುತ್ತಿದೆ. ಹಿಂದೆ, ಬಿಹಾರದಲ್ಲಿ ಪ್ರತಿನಿತ್ಯ ಅಪರಾಧ ನಡೆಯುತ್ತಿದೆ ಎಂದು



ದಕ್ಷಿಣದಲ್ಲಿ ನಾವು ಕುಳಿತು ಮಾತನಾಡುತ್ತಿದ್ದೆವು.

ಈಗ ಬಿಹಾರದಲ್ಲಿ ಶಾಂತಿ ನೆಲೆಸಿದೆ. ಕರ್ನಾಟಕದಲ್ಲಿ ಪ್ರತಿನಿತ್ಯ ಅದೇ ಪರಿಸ್ಥಿತಿ ಕಾಣಿಸಿಕೊಳ್ಳುತ್ತಿದೆ. ಸಿದ್ದರಾಮಯ್ಯನವರ ಸರಕಾರ ಯಾವಾಗ ಆಡಳಿತಕ್ಕೆ ಬರುತ್ತದೋ, ಕರ್ನಾಟಕ ರಾಜ್ಯದಲ್ಲಿ ಅಪರಾಧಿಗಳ ಕೈ ಮೇಲಾಗುತ್ತದೆ ಎಂದು ಕಿಡಿಕಾರಿದರು.

# ಪದವಿ ಪ್ರಥಮ ವರ್ಷದ ಪ್ರವೇಶ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಬಿ.ಎ, ಬಿ.ಕಾಂ, ಬಿ.ಎಸ್ಸಿ ಪದವಿಗಳ ಪ್ರಥಮ ವರ್ಷಕ್ಕೆ ಪ್ರವೇಶ ಆರಂಭವಾಗಿದೆ.

ಹಳೆಯ ನ್ಯಾಯಾಲಯ ಕಟ್ಟಡ, ಪಾಲಾ ಬಾದಾಮಿ ರಸ್ತೆಯಲ್ಲಿ ಸುಸಜ್ಜಿತ ಕಟ್ಟಡ, ಆಧುನಿಕ ತಂತ್ರಜ್ಞಾನ ಅಳವಡಿಕೆಯ ವರ್ಗ ಕೊಠಡಿಗಳು, ಶಾಲಾ ಕೊಠಡಿ ಮತ್ತು ಆವರಣಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಗ್ರಂಥಾಲಯ, ಸಭಾಂಗಣ ಮತ್ತು ಕೊಠಡಿಗಳು, ಆಕರ್ಷಕ ಉದ್ಯಾನವನ, ನುರಿತ ಮತ್ತು ಅನುಭವಿ ಪ್ರಾಧ್ಯಾಪಕರನ್ನು ಹೊಂದಿರುವ ಈ ಕಾಲೇಜು ಇತ್ತೀಚೆಗೆ ನ್ಯಾಕ್ ಕಮಿಟಿಯಿಂದ



ಬಿ+ ಶ್ರೇಣಿಯ ಮಾನ್ಯತೆ ಹೊಂದಿದೆ.

ಕಲಾ ವಿಭಾಗದಲ್ಲಿ ಇತಿಹಾಸ, ಐಚ್ಛಿಕ ಕನ್ನಡ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಇಂಗ್ಲೀಷ್, ವಿಜ್ಞಾನ ವಿಭಾಗದಲ್ಲಿ ಭೌತಶಾಸ್ತ್ರ, ಗಣಿತಶಾಸ್ತ್ರ, ಗಣಕಶಾಸ್ತ್ರ ಮತ್ತು ವಾಣಿಜ್ಯ ವಿಭಾಗದಲ್ಲಿ ವಿಶ್ವವಿದ್ಯಾಲಯ ನಿಗದಿಪಡಿಸಿರುವ ವಿಷಯಗಳ ಅಧ್ಯಯನಕ್ಕೆ ಅವಕಾಶವಿದೆ. ವಿದ್ಯಾರ್ಥಿಗಳ ಭೌತಿಕ ಮತ್ತು ಬೌದ್ಧಿಕ ಬೆಳವಣಿಗೆಗೆ ಅವಶ್ಯವಿರುವ ಎಲ್ಲ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

ಗದಗ-ಬೆಟಗೇರಿ ನಗರದ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕಾಲೇಜಿಗೆ ಪ್ರವೇಶ ಪಡೆದು ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಬೇಕೆಂದು ಕಾಲೇಜಿನ ಪ್ರಾಂಶುಪಾಲರಾದ ಎಮ್.ಯು. ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಳಿಗಾಗಿ ದೂ.ಸಂ-9845678751, 9902722685, 9886105765, 9686538150, 9900151161 ಸಂಪರ್ಕಿಸಬಹುದಾಗಿದೆ.

# ಜ. ಅನ್ನದಾನೀಶ್ವರ ಪ್ರೌಢಶಾಲೆಯ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದ ಶ್ರೀ ಜ.ಅನ್ನದಾನೀಶ್ವರ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ.77.08ರಷ್ಟಾಗಿದೆ. ಇದರಲ್ಲಿ 5 ಡಿಸ್ಟಿಂಕ್ಷನ್, 17 ಪ್ರಥಮ ಶ್ರೇಣಿ, 13 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಪಡೆದಿದ್ದಾರೆ. ಶಾಲೆಗೆ ಪ್ರಥಮ-ಧನುಶ್ರೀ ಸಜ್ಜನರ (93.60), ದ್ವಿತೀಯ-ತನುಜಾ ಮಾಗಡಿ (91.68), ತೃತೀಯ-ಅಶ್ವಿಕಾ ಸೃಜನಾ ರೇವಣ್ಣವರ (90.88), ಪಾರ್ವತಿ ಬಳಿಗಾರ ಶೇ 90.08, ನಂದಾ ಡೂಗಮ್ಮನವರ ಶೇ. 88.96 ಅಂಕ ಗಳಿಸಿದ್ದಾರೆ.

### ಅಭಿಮಾನಿ ಬಳಗದ ವತಿಯಿಂದ ಲಾಲಸಾಬ ಅರಗಂಜಿ ಜನ್ಮದಿನ ಆಚರಣೆ

# ಶೈಕ್ಷಣಿಕ ನೆರವಿಗೆ ಸದಾ ಸಿದ್ಧ

■ವಿಜಯಸಾಕ್ಷಿ ಸುದ್ದಿ, ನರಗುಂದ

ಈ ಕಾರ್ಯಕ್ರಮದಿಂದ ನನಗೆ ಸಾಮಾಜಿಕ ಜವಾಬ್ದಾರಿ ಹೆಚ್ಚಾಗಿದೆ. ಕಾಯಕವೇ ಕೈಲಾಸ ಎಂಬ ಬಸವಣ್ಣನವರ ನುಡಿಯಂತೆ ತಂದೆ ಹಾಕಿದ ಮಾರ್ಗದಲ್ಲಿಯೇ ಸಾಗುತ್ತಿರುವುದು ನನಗೆ ಸಂತಸ ಮಾತ್ರವಲ್ಲದೆ ಯಶಸ್ಸು ಮತ್ತು ಕೀರ್ತಿಯನ್ನು ಕೊಟ್ಟಿದೆ. ಶಿರೋಳ ಹಾಗೂ ಸುತ್ತಮುತ್ತಲಿನ ಗ್ರಾಮದ ರೈತರು ನನ್ನ ಬೆಳವಣಿಗೆಯಲ್ಲಿ ಅಗಾಧ ಪಾತ್ರವನ್ನು ವಹಿಸಿದ್ದಾರೆ. ಮಕ್ಕಳ ಶಿಕ್ಷಣಕ್ಕಾಗಿ ಹಾಗೂ ಶೈಕ್ಷಣಿಕ ಪ್ರಗತಿಗಾಗಿ ನಾನು ಸಹಾಯ ಮಾಡಲು ಸದಾ ಸಿದ್ಧ ಎಂದು ಉದ್ಯಮಿ ಲಾಲಸಾಬ ಅರಗಂಜಿ ಹೇಳಿದರು.

ತಾಲೂಕಿನ ಶಿರೋಳದಲ್ಲಿ ಲಾಲಸಾಬ ಅರಗಂಜಿ ಅಭಿಮಾನಿ ಬಳಗ-ಶಿರೋಳ ವತಿಯಿಂದ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಅಭಿನವ ಯಚ್ಚರಮಹಾಸ್ವಾಮಿಗಳು ಮಾತನಾಡಿ, ನಮ್ಮ ಮಠಕ್ಕೂ ಅರಗಂಜಿ ಅವರ ಮನೆತನಕ್ಕೂ ಇತಿಹಾಸದಿಂದಲೂ ಬಾಂಧವ್ಯ ಇದೆ. ಸದಾ ಕ್ರಿಯಾಶೀಲವಾಗಿ ಸಾಮಾಜಿಕ ಚಿಂತನೆ ಮಾಡುವ ಲಾಲಸಾಬ ಅರಗಂಜಿಯವರಿಗೆ ಇನ್ನೂ ಹೆಚ್ಚಿನ ಯಶಸ್ಸು ದೊರೆಯಲಿ ಎಂದು ಆಶೀರ್ವಚನ ನೀಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಯುವ ಮುಖಂಡ ಮಹೇಶಗೌಡ ಸಿ.ಪಾಟೀಲ ಮಾತನಾಡಿ, ಲಾಲಸಾಬ ಅರಗಂಜಿ ಅಭಿಮಾನಿ ಬಳಗದಿಂದ ಗ್ರಾಮದಲ್ಲಿ ಸಾಕಷ್ಟು ಸಾಮಾಜಿಕ ಕಾರ್ಯಗಳು ನಡೆಯುತ್ತಿದ್ದು, ಕಳೆದ ವರ್ಷ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಮತ್ತು ಪೆನ್ ವಿತರಣೆ ಹಾಗೂ ಸರ್ಕಾರಿ ಶಾಲೆಗೆ ದೊಡ್ಡ ಐಇಎ ಟಿವಿಯನ್ನು ಕೊಡುಗೆಯಾಗಿ ನೀಡಿದ್ದಾರೆ. ಈ ಕಾರ್ಯಕ್ರಮದಲ್ಲಿ ಕ್ರೀಡೆಯಲ್ಲಿ ಸಾಧನೆಗೈದವರನ್ನು ಹಾಗೂ ಪಿಯುಸಿಯಲ್ಲಿ ಹೆಚ್ಚಿನ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಒಃಃಖನಲ್ಲಿ ಸಿಟ್ ಪಡೆದವರನ್ನು ಹಾಗೂ ಶ್ರಮಿಕ ವರ್ಗದವರನ್ನು ಗುರುತಿಸಿ ಸನ್ಮಾನಿಸಿರುವುದು ಅವರ ಬಳಗಕ್ಕೆ ಇರುವ ಸಾಮಾಜಿಕ ಕಳಕಳಿಯನ್ನು ತೋರಿಸುತ್ತದೆ ಎಂದರು.

ರಸಮಂಜರಿ ಕಾರ್ಯಕ್ರಮದ ಕೇಂದ್ರಬಿಂದುವಾಗಿದ್ದ ಜ್ಯೂ. ಕ್ರೇಜಿಸ್ಟಾರ್ ರವಿಚಂದ್ರನ್ ಮಾತನಾಡಿ, ಮೊಟ್ಟ ಮೊದಲಿಗೆ ಒಬ್ಬ ವ್ಯಾಪಾರಸ್ಥರಿಗೆ ಇರುವ ಅಭಿಮಾನಿ ಬಳಗವನ್ನು ನೋಡುತ್ತಿದ್ದೇನೆ. ಮಧ್ಯರಾತ್ರಿಯಲ್ಲೂ ಹೆಣ್ಣು ಮಕ್ಕಳು, ಮಕ್ಕಳು ಹುಟ್ಟುಹಬ್ಬಕ್ಕೆ ಸಾಕ್ಷಿಯಾಗಿದ್ದು ಅವರಿಗೆ ಇರುವ ಪ್ರಾಮಾಣಿಕತೆಯನ್ನು ತೋರಿಸುತ್ತದೆ ಎಂದರು.

ಪ್ರಭಾಕರ ಉಳ್ಳಾಗಡ್ಡಿ ಪ್ರಾಸ್ತಾವಿಕ ಮಾತನಾಡಿದರು. ಮಂಜುನಾಥ ಕೊಣ್ಣೂರ, ಶರಣಯ್ಯ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ನಂತರ ರಾಜು ಸುಳ್ಳದ ತಂಡದಿಂದ ರಸಮಂಜರಿ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ನಿಂಗಣ್ಣ ಗಾಡಿ, ವಿ.ಕೆ. ಮರಿಗುದ್ದಿ, ನಾಗನಗೌಡ ತಿಮ್ಮನಗೌಡ್ರ, ಡಿ.ವೈ. ಕಾಡಪ್ಪನವರ, ಅನಿಲ ಧರಿಯನ್ನವರ, ಬಾಬುಗೌಡ್ರ ತಿಮ್ಮನಗೌಡ್ರ, ಈರಯ್ಯ ಮಠದ, ಬಿ.ಎಸ್. ಸಾಲಿಮಠ, ದ್ಯಾಮಣ್ಣ ತೆಗ್ಗಿ, ಪರಸಪ್ಪ ರಾಥೋಡ್, ಶರಣಪ್ಪ ಕಾಡಪ್ಪನವರ, ಅಕ್ಷಯ ಗಡೆಕಾರ, ಚೇತನ್ ಕಲಾಲ, ಅರುಣ ದಾಸರ, ರಾಜು ಚಳ್ಳಮರದ, ಅಶೋಕ ತಡಹಾಳ, ಗಿರೀಶ ಗಾಣಿಗೇರ, ಸೇರಿದಂತೆ ಅಭಿಮಾನಿ ಬಳಗದವರು ಉಪಸ್ಥಿತರಿದ್ದರು.

# ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಒಡೆಯರ ಮಲ್ಲಾಪುರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಶೇ. 100ರಷ್ಟಾಗಿದೆ. ಪರೀಕ್ಷೆಗೆ ಕುಳಿತ 49 ವಿದ್ಯಾರ್ಥಿಗಳಲ್ಲಿ 16 ವಿದ್ಯಾರ್ಥಿಗಳು ಶೇ. 90ಕ್ಕಿಂತ ಹೆಚ್ಚು ಅಂಕ, 11 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 21 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಶ್ರೇಣಿಯಲ್ಲಿ ಪಾಸಾಗಿದ್ದಾರೆ.

ವಿದ್ಯಾರ್ಥಿಗಳಾದ ಚೈತ್ರಾ ಎಸ್ ಕೋಷ್ಠಿ ಮತ್ತು ವಿಜಯಲಕ್ಷ್ಮೀ ಎಂ.ಲಮಾಣಿ ಶೇ. 97.28 ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಭಾಗ್ಯಲಕ್ಷ್ಮೀ ಡಿ.ಭಜಕ್ಕನವರ (ಶೇ 96.96) ದ್ವಿತೀಯ ಹಾಗೂ ಸರೋಜಾ ಡೊಕ್ಕಣ್ಣವರ ಶೇ. (96.80) ತೃತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳ ಉತ್ತಮ ಸಾಧನೆಗೆ ಅಧಿಕಾರಿ ವರ್ಗದವರು, ಪಾಲಕರು ಹರ್ಷ ವ್ಯಕ್ತಪಡಿಸಿದ್ದಾರೆ ಎಂದು ಪ್ರಾಚಾರ್ಯರಾದ ಡಿ.ಸಿ. ನರೇಗಲ್ಲ ತಿಳಿಸಿದ್ದಾರೆ.

# ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕಾನೂನು ಮಹಾವಿದ್ಯಾಲಯ ಹುಬ್ಬಳ್ಳಿ ವತಿಯಿಂದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಾನೂನು ಮಹಾವಿದ್ಯಾಲಯದ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭವು ದತ್ತು ಗ್ರಾಮವಾದ ಹೊಸಳ್ಳಿಯಲ್ಲಿ ನಡೆಯಿತು.

ಪ್ರಾಚಾರ್ಯೆ ಪಲ್ಲವಿ ಬುಯ್ಯಾರ ಶಿಬಿರದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಕ್ಷೀಯ ಭಾಷಣದಲ್ಲಿ ಹುಲಕೋಟಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಆರ್.ಎಂ. ಮೂಲಿಮನಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಿ.ಎಸ್. ಅಂಗಡಿ




ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಉಪನ್ಯಾಸಕರಾದ ಎಸ್.ಐ. ಅಣ್ಣಿಗೇರಿ, ಎಂ.ವಿ. ಹಿರೇಮಠ, ವಿಶ್ವನಾಥ ಹಿರೇಮಠ, ಮಹಾಂತೇಶ ಮಡ್ಡಿ, ಉಪನ್ಯಾಸಕರಾದ ಎನ್. ಎನ್. ಮುಲ್ಲಾ, ಎ.ಆರ್. ಕೇರಿ ಉಪಸ್ಥಿತರಿದ್ದರು. ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜಕರಾದ ಮಹಾಂತೇಶ ಅಂ.ಕೂರಡಕೇರಿ, ಕುಮಾರ ಮಂಜುನಾಥ ದೇಸಾಯಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಯುವಕರ ಸಾಮರ್ಥ್ಯದ ಅರಿವು ಮೂಡಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಯಾವುದೇ ಕಾರ್ಯ ಯಶಸ್ವಿಯಾಗಬೇಕಾದರೆ ಅದಕ್ಕೆ ಯುವಶಕ್ತಿ ಕಾರಣವಾಗಿರುತ್ತದೆ. ಯುವಕರು ಮನಸ್ಸು ಮಾಡಿದರೆ ಎಂತಹ ಕಷ್ಟದ ಕಾರ್ಯವನ್ನೂ ಸಹ ಸುಲಭವಾಗಿ ನಿಭಾಯಿಸಬಹುದು. ಯುವ ಶಕ್ತಿಯ ಮುಂದೆ ಯಾವುದೇ ಶಕ್ತಿ ನಿಲ್ಲಲಾರದು ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಅವರು ಪಟ್ಟಣದ ಮ್ಯಾಗೇರಿ ಓಣಿಯ ಶ್ರೀ ಹೊನ್ನಕೇರಿ ಮಲ್ಲಯ್ಯ ದೇವಸ್ಥಾನದ ಮೂರ್ತಿ ಪ್ರತಿಷ್ಠಾಪನೆ, ಸಭಾಭವನ ಉದ್ಘಾಟನಾ



ಸಮಾರಂಭ ಹಾಗೂ ಧರ್ಮ ಸಭೆ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಯುವಕರಿಗೆ ತಮ್ಮಲ್ಲಿರುವ ಸಾಮರ್ಥ್ಯದ ಬಗ್ಗೆ ಸರಿಯಾದ ಅರಿವು ಮೂಡಬೇಕಾಗಿದೆ. ದುಶ್ಚಟಗಳಿಗೆ ದಾಸರಾಗಿ ತಮ್ಮಲ್ಲಿರುವ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತಿದ್ದಾರೆ. ನಮ್ಮ ಸಂಸ್ಕೃತಿ, ಸಂಪ್ರದಾಯಗಳಿಗೆ ಆದ್ಯತೆ ನೀಡಬೇಕಿದೆ. ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಅವುಗಳನ್ನು ಉಳಿಸಿ ಬೆಳೆಸುವ ಕಾರ್ಯಕ್ಕೆ ಇಲ್ಲಿನ ಯುವ ಪಡೆ ಮುಂದಾಗಿರುವದು ಶ್ಲಾಘನೀಯ ಎಂದರು. ಹುಲ್ಲೂರು ಅಮೋಘ ಶಿದ್ದೇಶ್ವರಮಠದ ಶ್ರೀ ರಾಯಪ್ಪಯ್ಯನವರು ಅಮೋಘಿಮಠ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಅರ್ಚಕ ನೀಲಪ್ಪ ಕೋರಿ ಉಪಸ್ಥಿತರಿದ್ದರು. ಸಭೆಯ ಅಧ್ಯಕ್ಷತೆಯನ್ನು ಕಮಿಟಿ ಅಧ್ಯಕ್ಷ ಮಲ್ಲೇಶ ಗೊಜಗೊಜಿ ವಹಿಸಿದ್ದರು. ಉದ್ಯಮಿ ಮಲ್ಲೇಶಪ್ಪ ತಾಂಬೆ ದಂಪತಿಗಳು ಸಭಾಭವನ ಉದ್ಘಾಟಿಸಿದರು. ಮಹೇಶ ಲಮಾಣಿ ಮತ್ತು ರಾಮಕೃಷ್ಣ ದೊಡ್ಡಮನಿ ಸಿಬಾರ ಉದ್ಘಾಟನೆ ಮಾಡಿದರು. ನಿಂಗಪ್ಪ ಬನ್ನಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಗಂಗಮ್ಮ ಗದ್ದಿ, ವೀರೇಂದ್ರಗೌಡ ಪಾಟೀಲ, ಮಂಜುನಾಥ ಘಂಟಿ, ಜಯಕ್ಕ ಕಳ್ಳಿ, ಭಾಗ್ಯಶ್ರೀ ಬಾಬಣ್ಣ, ಶಿದ್ದಪ್ಪ ಪೂಜಾರ, ಗಣಪ್ಪ ಉಳ್ಳಟ್ಟಿ, ಮಲ್ಲಪ್ಪ ಕೋರಿ, ಮಲ್ಲಪ್ಪ ಗುಡಗುಂಟಿ, ಅಮರಪ್ಪ ಗುಡಗುಂಟಿ, ಭಾಯಪ್ಪ ಬಸಾಪೂರ, ರಾಮಣ್ಣ ರಿತ್ತಿ, ಪಾಪಣ್ಣ ಬನ್ನಿ, ಮಲ್ಲಮ್ಮ ಚಿಂಚಲಿ ಸೇರಿದಂತೆ ಅನೇಕ ಮುಖಂಡರು ವೇದಿಕೆಯಲ್ಲಿದ್ದರು. ಪುರಸಭೆ ಮಾಜಿ ಅಧ್ಯಕ್ಷ ವಿ.ಜಿ. ಪಡಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನೀಲಪ್ಪ ಪಡಗೇರಿ ಸ್ವಾಗತಿಸಿದರು, ನಾಗರಾಜ ಶಿಗ್ಗಿ ನಿರೂಪಿಸಿದರು.



ಇತ್ತೀಚೆಗೆ ಸಿಡಿಲಿನಿಂದ ಮೃತಪಟ್ಟ ಸೂರಣಗಿ ಗ್ರಾಮದ ರೈತ ಸೋಮಪ್ಪ ಭೀಮಪ್ಪ ಪೂಜಾರ ಅವರ ಕುಟುಂಬಕ್ಕೆ ಮಂಗಳವಾರ ಶಾಸಕ ಡಾ. ಚಂದ್ರು ಲಮಾಣಿ ಸರ್ಕಾರದ ಪರಿಹಾರ ಧನದ ಚೆಕ್ ವಿತರಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ, ಕಂದಾಯ ಇಲಾಖೆಯ ಅಧಿಕಾರಿಗಳು ಇದ್ದರು.

## ಕೇಂದ್ರದ ನಿರ್ಧಾರಕ್ಕೆ ಎಚ್.ಡಿ.ಡಿ ಬೆಂಬಲ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಕೈಗೊಳ್ಳುತ್ತಿರುವ ಎಲ್ಲಾ ಕ್ರಮಗಳನ್ನು ಮುಕ್ತಕಂಠದಿಂದ ಬೆಂಬಲಿಸುವುದಾಗಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಮಾಜಿ ಪ್ರಧಾನಿಗಳಾದ ಹೆಚ್.ಡಿ. ದೇವೇಗೌಡ ಘೋಷಿಸಿದರು.

ಈ ಬಗ್ಗೆ ನವದೆಹಲಿಯಲ್ಲಿ ಮಂಗಳವಾರ ಬೆಳಿಗ್ಗೆ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಹಲ್ಗಾಮ್ ಘಟನೆ ಅಮಾನವೀಯ. ಮೊದಲ ಬಾರಿಗೆ ಭಯೋತ್ಪಾದಕರು ಪ್ರವಾಸಿಗರ ಮೇಲೆ ದಾಳಿ ಮಾಡಿದ್ದಾರೆ. ಇದು ಅತ್ಯಂತ ಹೇಯ ಕೃತ್ಯವಾಗಿದೆ. ಈ ಕೆಲಸ ಮಾಡಿದವರಿಗೆ ತಕ್ಕ ಶಾಸ್ತಿ ಆಗಲೇಬೇಕು. ಈ ಹಿನ್ನೆಲೆಯಲ್ಲಿ ಪ್ರಧಾನಿಗಳು ಕೈಗೊಳ್ಳುವ ನಿರ್ಧಾರಕ್ಕೆ ಜೆಡಿಎಸ್ ಬದ್ಧವಾಗಿರುತ್ತದೆ ಎಂದು ಸ್ಪಷ್ಟಪಡಿಸಿದರು.

### ಜಿಲ್ಲೆಯಲ್ಲಿ ಕುಡಿಯುವ ನೀರಿನ ಸರಬರಾಜು ಕುರಿತು ಕೆಡಿಪಿ ಸಭೆಯಲ್ಲಿ ಗಂಭೀರ ಚರ್ಚೆ

# ಒಪ್ಪಂದದಂತೆ ನೀರು ಪೂರೈಸದಿದ್ದರೆ ದಂಡ ವಿಧಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸರಬರಾಜು ಕುರಿತು ಜೂನ್ 20ರೊಳಗೆ ಥರ್ಡ್ ಪಾರ್ಟಿಯಿಂದ ವರದಿ ಪಡೆದು ಸಲ್ಲಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ಕೆಡಿಸಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಏಜೆನ್ಸಿ ಒಪ್ಪಂದದ ಪ್ರಕಾರ ನೀಡಬೇಕಾಗಿದ್ದ ಎಂಎಲ್‌ಡಿ ನೀರು ನೀಡದೇ ಇದ್ದ ಕಾರಣ ಸಮೀಕ್ಷೆ ನಡೆಸಿ ಒಪ್ಪಂದದ ಪ್ರಕಾರ ನೀರು ಪೂರೈಕೆ ಮಾಡದಿದ್ದಲ್ಲಿ ಏಜೆನ್ಸಿಗೆ ದಂಡ ವಿಧಿಸಬೇಕು. ಬೇಸಿಗೆಯಲ್ಲಿ ಜಿಲ್ಲೆಯ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಿದರು.




ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ನರೇಗಾ ಕಾಮಗಾರಿಯಲ್ಲಿ ಸರ್ಕಾರಿ ಶಾಲಾ-ಕಾಲೇಜುಗಳ ಮೂಲಭೂತ ಅಭಿವೃದ್ಧಿಗೆ ಪೂರಕವಾದ ಕಾಮಗಾರಿ ಸೇರಿದಂತೆ ರೈತರ ಹೊಲದ ಬದು ನಿರ್ಮಾಣ ಕಾಮಗಾರಿಗಳಿಗೆ ಅನುಮತಿ ಮಾಡಿಕೊಡಬೇಕು ಎಂದು ಸೂಚಿಸಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ನರಗುಂದ ಕ್ಷೇತ್ರದಲ್ಲಿರುವ ತಾಂಡಾಗಳಿಗೆ ವಸತಿ ಶಾಲೆ ಪ್ರಾರಂಭಿಸುವಂತೆ ಪ್ರಸ್ತಾವನೆ ಸಲ್ಲಿಸಲು ತಿಳಿಸಲಾಗಿತ್ತು ಎಂದು ಕೇಳಿದರು. ಇದಕ್ಕೆ ಉತ್ತರಿಸಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಈಗಾಗಲೇ ಪ್ರಸ್ತಾವನೆಗಳನ್ನು ಸಲ್ಲಿಸಿದೆ ಎಂದು ತಿಳಿಸಿದರು. ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಪ್ರಸ್ತಾವನೆಗಳನ್ನು ಸಲ್ಲಿಸಿದ ಕೂಡಲೇ ಒಂದು ಪ್ರತಿಯನ್ನು ಸಂಬಂಧಪಟ್ಟ ಶಾಸಕರಿಗೆ ಕಳುಹಿಸಬೇಕು ಎಂದು ಅಧಿಕಾರಿಗೆ ನಿರ್ದೇಶಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಈ ಹಿಂದೆ ಪಿಯುಸಿಯಲ್ಲಿ ಜಿಲ್ಲೆಯು ಕೊನೆಯ ಸ್ಥಾನ ಪಡೆದುಕೊಂಡಿತ್ತು. ಈ ಬಾರಿ 25ನೇ ಸ್ಥಾನಕ್ಕೇರಿದ್ದು ಅಭಿನಂದನೀಯ. ಫಲಿತಾಂಶ ಬಂದ ಕೂಡಲೇ ಅದರ ಬಗ್ಗೆ ವಿಶ್ಲೇಷಣೆ ಮಾಡಿಕೊಳ್ಳಬೇಕು. ಸರ್ಕಾರಿ, ಅನುದಾನಿತ, ಅನುದಾನರಹಿತ ಇದರಲ್ಲಿ ಯಾವ ಕಾಲೇಜಿನ ಫಲಿತಾಂಶ ಉತ್ತಮವಾಗಿದೆ ಎನ್ನುವುದರ ಬಗ್ಗೆ ತಿಳಿದುಕೊಳ್ಳಬೇಕು ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಎಲ್ಲಾ ಕಾಲೇಜು ಪ್ರಾಚಾರ್ಯರ ಸಭೆ ಕರೆದು ಶೈಕ್ಷಣಿಕ ವರ್ಷದ ಪ್ರಾರಂಭದಿಂದಲೇ ಕಾಲೇಜುವಾರು ಗುರಿ ನಿಗದಿ ಮಾಡಿ, ಕಾರ್ಯಾಗಾರ ಮಾಡಬೇಕು ಎಂದು ಜಿ.ಪಂ ಸಿಇಒ ಅವರಿಗೆ ಸೂಚನೆ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಎಸ್.ಎನ್. ಬಳ್ಳಾರಿ, ಎಂ.ಡಿ. ಮಕಾಂದಾರ, ಪ್ರಭು ಮೇಟಿ, ಅಶೋಕ ಮಂದಾಲಿ, ಶಾರದ ಹಿರೇಗೌಡರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಗಣ್ಯರು, ಅಧಿಕಾರಿಗಳು ಹಾಜರಿದ್ದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಲಕ್ಷ್ಮೇಶ್ವರ ತಾಲೂಕಿಗೆ ತುಂಗಭದ್ರ ನದಿ ನೀರನ್ನು ಪೂರೈಸುವ ಪೈಪ್ ಪದೇ ಪದೇ ದುರಸ್ತಿಗೆ ಬರುತ್ತಿದ್ದು, ಅದಕ್ಕೆ ಶಾಶ್ವತ ಪರಿಹಾರ ಒದಗಿಸಬೇಕು ಎಂದರು. ಇದಕ್ಕೆ ಪ್ರತಿಕ್ರಿಯಸಿದ ಅಧಿಕಾರಿಗಳು, ಸೂರಣಗಿಯಿಂದ ಲಕ್ಷ್ಮೇಶ್ವರವರೆಗಿನ ಪೈಪ್ ದುರಸ್ತಿ ಕಾರ್ಯಕ್ಕೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಿದ್ದು, ಶೀಘ್ರವೇ ಕಾಮಗಾರಿ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

### ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ನಾಗಪ್ಪ ಹೂವಿನಭಾವಿ

# ಕನ್ನಡಿಗರಲ್ಲಿ ಕನ್ನಡದ ಪ್ರಜ್ಞೆ ಮೂಡಿಸಿದ ಪರಿಷತ್ತು

■ವಿಜಯಸಾಕ್ಷಿ ಸುದ್ದಿ, ಗದಗ

ಭಾಷೆ, ನೆಲ, ಜಲದ ಪ್ರಶ್ನೆ ಬಂದಾಗ ಶತಮಾನಗಳಿಂದಲೂ ಕನ್ನಡ ಸಾಹಿತ್ಯ ಪರಿಷತ್ತು ಪ್ರಭುತ್ವವನ್ನು ಎಚ್ಚರಿಸುವ ಕಾರ್ಯ ಮಾಡುತ್ತಾ ಬಂದಿದೆ. ಪುಸ್ತಕ ಪ್ರಕಟನೆಗಳ ಮೂಲಕ ಕನ್ನಡಿಗರಲ್ಲಿ ವೈಚಾರಿಕ ಪ್ರಜ್ಞೆಯನ್ನು ಬೆಳೆಸಿ ಕನ್ನಡ, ಕನ್ನಡಿಗ ಮತ್ತು ಕರ್ನಾಟಕತ್ವವನ್ನು ಸದಾ ಜಾಗೃತವಾಗಿಡುವ ಕೆಲಸ ಮಾಡಿದೆ. ಸಾಹಿತ್ಯ, ಸಂಸ್ಕೃತಿಯ ಮೂಲಕ ಸಾಮಾಜಿಕ ಸ್ವಾಸ್ಥ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಪರಿಷತ್ತಿನ ಪಾತ್ರ ದೊಡ್ಡದು ಎಂದು ಕೊಪ್ಪಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರದ ಯಲಬುರ್ಗಾದ ಉಪನ್ಯಾಸಕರಾದ ಡಾ. ನಾಗಪ್ಪ ಹೂವಿನಭಾವಿ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗದಲ್ಲಿ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಜನಸಾಮಾನ್ಯರತ್ತ ಕನ್ನಡ ಸಾಹಿತ್ಯ ಪರಿಷತ್ತು ಎಂಬ ವಿಷಯದ ಕುರಿತು ಮಾತನಾಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ಉಮೇಶ, ಸಾಹಿತ್ಯ ಮನುಷ್ಯನನ್ನು ಮಾನವೀಯ ನೆಲೆಯಲ್ಲಿ ಚಿಂತಿಸುವಂತೆ ಮಾಡುತ್ತದೆ. ನಾಡು-ನುಡಿ ಸಂರಕ್ಷಣೆ ಹಿನ್ನೆಲೆಯಲ್ಲಿ ಪರಿಷತ್ತು ರೂಪುಗೊಂಡಿದೆ. ಜಿಲ್ಲೆಯಲ್ಲಿ ವಿವೇಕಾನಂದಗೌಡ ಪಾಟೀಲ ನೇತೃತ್ವದಲ್ಲಿ ಪರಿಷತ್ತಿನ ಚಟುವಟಿಕೆಗಳು ಕ್ರಿಯಾಶೀಲವಾಗಿ ಜರುಗುತ್ತಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಗುರಣ್ಣ ಬಳಗಾನೂರ, ಡಾ. ಆರ್.ಎನ್. ಗೋಡಬೋಲೆ, ಶ್ರೀನಿವಾಸ ಹುಯಿಲಗೋಳ, ವಾಸಣ್ಣ ಕುರಡಗಿ, ಫಕ್ಕೀರಪ್ಪ ಹೆಬಸೂರ, ತಯ್ಯಬಅಲಿ ಹೊಂಬಳ, ಎ.ಎಸ್. ಮಕಾನದಾರ, ಎನ್.ಬಿ. ಕಳಸಾಪೂರ, ಡಾ. ರಶ್ಮಿ ಅಂಗಡಿ, ಎಸ್.ವಿ. ಗುಂಜಾಳ ಅವರನ್ನು ಸನ್ಮಾನಿಸಲಾಯಿತು.

ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಾ. ರಶ್ಮಿ ಅಂಗಡಿ ಸ್ವಾಗತಿಸಿದರು. ರಕ್ಷಿತಾ ಗಿಡ್ನಂದಿ ವಂದಿಸಿದರು. ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಪ್ರೊ. ಕೆ.ಎಚ್. ಬೇಲೂರ, ಡಾ. ಜಿ.ಬಿ. ಪಾಟೀಲ, ಅಂದಾನಪ್ಪ ವಿಭೂತಿ, ಸಿ.ಕೆ. ಎಚ್. ಶಾಸ್ತ್ರಿ, ಡಿ.ಎಸ್. ಬಾಪುರಿ, ಪ್ರ.ತೋ. ನಾರಾಯಣಪೂರ, ಬಸವರಾಜ ವಾರಿ, ಸತೀಶ ಚನ್ನಪ್ಪಗೌಡ್ರ, ಬಿ.ಎಸ್. ಹಿಂಡಿ, ಷಡಕ್ಷರಿ ಮೆಣಸಿನಕಾಯಿ, ಅ.ದ. ಕಟ್ಟಿಮನಿ, ಶಿಲ್ಪಾ ಮ್ಯಾಗೇರಿ, ಶಕುಂತಲಾ ಗಿಡ್ನಂದಿ, ಡಾ. ಬಿ.ಎಲ್. ಚವ್ಹಾಣ, ಬಸವರಾಜ ನೆಲಜೇರಿ, ಸುರೇಶ ಕುಂಬಾರ, ವಿ.ಎಸ್. ದಲಾಲಿ, ಎಸ್.ಐ. ಯಾಳಗಿ, ಬಸವರಾಜ ಗಣಪ್ಪನವರ, ಶರಣಪ್ಪ ಹೊಸಂಗಡಿ, ಎಸ್. ಎಂ. ಕಾತರಕಿ, ಜ್ಯೋತಿ ಹೇರಲಗಿ ಮೊದಲಾದವರು ಉಪಸ್ಥಿತರಿದ್ದರು.



ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಬರಹಗಾರರು ಸಾಕಷ್ಟು ಪ್ರಮಾಣದಲ್ಲಿ ಕೃಷಿ ಮಾಡುತ್ತಿದ್ದರೂ ಓದುಗರ ಸಂಖ್ಯೆ ತೃಪ್ತಿದಾಯಕವಾಗಿಲ್ಲ. ಈ ಹಿನ್ನೆಲೆಯಲ್ಲಿ ಓದುವ ಸಂಸ್ಕೃತಿಯನ್ನು ಬೆಳೆಸುವದು ಇಂದಿನ ಅಗತ್ಯವಾಗಿದೆ.

ಕನ್ನಡದ ಉಳಿವು ಶಾಲೆಗಳನ್ನು ಅವಲಂಬಿಸಿರುವದರಿಂದ ಕನ್ನಡ ಶಾಲೆಗಳ ಸಬಲೀಕರಣ ಪ್ರಥಮ ಆದ್ಯತೆಯಾಗಬೇಕು ಎಂದು ತಿಳಿಸಿದರು.

# 'ಬಸವ ಬುತ್ತಿ' ಮೆರವಣಿಗೆ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಶಿಗ್ಲಿ

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಶ್ರೀ ಗುರು ಕೊಟ್ಟೂರೇಶ್ವರ ಸ್ವಾಮಿಯ ದೇವಸ್ಥಾನ ಲೋಕಾರ್ಪಣೆ, ಮೂರ್ತಿ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮಗಳ ನಿಮಿತ್ತ ಮಾ. 28ರಿಂದ ಪ್ರವಚನ, ಜನಜಾಗೃತಿಗಾಗಿ ಪಾದಯಾತ್ರೆ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹೂವಿನ ಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆಯುತ್ತಿವೆ.

ಮಂಗಳವಾರ ಸಂಜೆ ಗ್ರಾಮದಲ್ಲಿ ಬಸವ ಬುತ್ತಿ ಮೆರವಣಿಗೆ ಕಾರ್ಯಕ್ರಮ ಗಮನ ಸೆಳೆಯಿತು. ಗ್ರಾಮದ ಎಲ್ಲ ಮಹಿಳೆಯರು, ಮಕ್ಕಳು ಶಿಗ್ಲಿ ಸೀರೆ-ಕುಪ್ಪಸ ತೆ-ಟ್ಟು ತಲೆಯ ಮೇಲೆ ಭಕ್ತಿಯಿಂದ ಮಾಡಿದ ಬುತ್ತಿಯ ಗಂಟು ಹೊತ್ತು ಗ್ರಾಮದ ಪ್ರಮುಖ ಮಾರ್ಗದ ಮೂಲಕ ದೇವಸ್ಥಾನದಲ್ಲಿ ಜಮಾವಣೆಗೊಂಡರು. ಶ್ರೀಗಳ ಪ್ರವಚನದ ನಂತರ ಎಲ್ಲರೂ ತಂದಿದ್ದ ಬುತ್ತಿಯನ್ನು ಅತ್ಯಂತ ಸಂತೋಷದಿಂದ ಊಟ ಮಾಡಿ ಸಂಭ್ರಮ-ಸಂತಸಪಟ್ಟರು.



ಈ ವೇಳೆ ಮಾತನಾಡಿದ ಶ್ರೀ ಚನ್ನವೀರ ಮಹಾಸ್ವಾಮಿಗಳು, ಮಹಾಮಾನವತಾವಾದಿ, ವಿಶ್ವಗುರು ಬಸವಣ್ಣನವರ ಪರಿಕಲ್ಪನೆಯ ಬಸವ ಬುತ್ತಿ ಅತ್ಯಂತ ಅರ್ಥಪೂರ್ಣವಾಗಿದೆ. ಬಸವಣ್ಣನವರ ಸಮಾನತೆ ಹಾಗೂ ದಾಸೋಹದ ಮಹತ್ವ ಸಾರುವ ಬಸವ ಬುತ್ತಿ ಕಾರ್ಯಕ್ರಮದಿಂದ ಎಲ್ಲ ಜಾತಿ, ಜನಾಂಗದವರಲ್ಲಿ ಪರಸ್ಪರ ಸ್ನೇಹ, ಅನ್ಯೋನ್ಯತೆ, ಭ್ರಾತೃತ್ವ, ಬಾಂಧವ್ಯ, ಸಮಭಾವ ಮೂಡುತ್ತದೆ. ಪರಸ್ಪರ ಹಂಚಿಕೊಂಡು ಉಣ್ಣುವುದರಿಂದ ಬಡವ-ಬಲ್ಲಿದೆಂಬ ಬೇಧ ಭಾವ ತೊಲಗಿ ಎಲ್ಲರೂ ಒಂದೇ ಎಂಬ ಭಾವನೆ ಮೂಡುತ್ತದೆ. ಹಬ್ಬ, ಉತ್ಸವ, ಜಾತ್ರೆ, ಸಮಾರಂಭಗಳ ನೆಪದಲ್ಲಿ ಇಂತಹ ಅರ್ಥಪೂರ್ಣ ಕಾರ್ಯಕ್ರಮಗಳು ನಡೆಯಬೇಕು ಎಂದರು.

ಶ್ರೀ ಗುರು ಕೊಟ್ಟೂರೇಶ್ವರ ವಿವಿಧೋದ್ದೇಶಗಳ ಸೇವಾ ಸಮಿತಿ ಅಧ್ಯಕ್ಷ ಮಹಾದೇವಪ್ಪ ಬೆಳವಿಗಿ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಡಿವೈ ಹುನಗುಂದ, ಅಶೋಕ ಶಿರಹಟ್ಟಿ ರಾಜು ಓಲೇಕಾರ, ರಾಮಣ್ಣ ಲಮಾಣಿ (ಶಿಗ್ಲಿ) ನಾಗಪ್ಪ ತಂಬ್ರಳ್ಳಿ, ನಾಗರಾಜ ಬೆಳವಿಗಿ, ಮಂಜುನಾಥ ಗುಂಡಮಿ, ಶಿವಯೋಗಿ ಹಿರೇಮಠ, ಶಿವಯ್ಯ ಪೂಜಾರ, ಮಂಜುನಾಥ ಬೀಳಗಿ, ರಾಘವೇಂದ್ರ ಅಸುಂಡಿ ಸೇರಿ ಹಿರಿಯರು, ಯುವಕರು ಪಾಲ್ಗೊಂಡಿದ್ದರು.

# ಜಾತಿ ಗಣತಿ ಕಾರ್ಯಕ್ಕೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಂಗಳವಾರ ಶಿರಹಟ್ಟಿ ತಾಲೂಕಿನ ಛಬ್ಬಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣದ ಗಣತಿ ಕಾರ್ಯಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಸರಕಾರ ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತಂತೆ ನ್ಯಾ. ಎಚ್. ಎನ್. ನಾಗಮೋಹನ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗ ರಚಿಸಿದ್ದು, ಈ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆ ನಡೆಸುತ್ತಿದೆ. ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿಯ ಕುಟುಂಬಗಳು ನಿಖರವಾದ ಮಾಹಿತಿಯನ್ನು ನೀಡಬೇಕೆಂದು ಹೇಳಿದರು.

ಜಾನು ಲಮಾಣಿ, ದೇವಪ್ಪ ಲಮಾಣಿ, ತಿಪ್ಪಣ್ಣ ಲಮಾಣಿ, ರುದ್ರಪ್ಪ ಲಮಾಣಿ, ರವಿ ಲಮಾಣಿ, ಉಮೇಶ ಲಮಾಣಿ, ನಿಂಗಪ್ಪ ಲಮಾಣಿ, ಶೇಖಪ್ಪ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

# ಬೆಳೆ ಹಾನಿ ಪರಿಹಾರ ವಿತರಣೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕೆರೆಹಳ್ಳಿ ಗ್ರಾಮದ ನಿಂಗಪ್ಪ ಹೊಳೆಯಪ್ಪ ಮೇವುಂಡಿ ಇವರ ಜಮೀನಿನಲ್ಲಿ ಆಕಸ್ಮಿಕವಾಗಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಕಬ್ಬು ಬೆಳೆಯು ಬೆಂಕಿಯಿಂದ ನಾಶಗೊಂಡಿತ್ತು. ಈ ಬಗ್ಗೆ ಶಾಸಕ ಡಾ. ಚಂದ್ರು ಲಮಾಣಿ ಹೆಸ್ಕಾಂ ಇಲಾಖೆಯ ಅಧಿಕಾರಿಗಳೊಂದಿಗೆ ಸತತ ಪ್ರಯತ್ನದಿಂದಾಗಿ ಹೆಸ್ಕಾಂನಿಂದ ಕೊಡಮಾಡಿದ 372000 ರೂ ಪರಿಹಾರಧನದ ಚೆಕ್‌ನ್ನು ರೈತರಿಗೆ ವಿತರಣೆ ಮಾಡಲಾಯಿತು.

ಹೆಸ್ಕಾಂ ಎಇಇ ಅಂಜನಪ್ಪ, ಅನಿಲಗೌಡ ಮಲಗೌಡ್ರ, ಗ್ರಾ.ಪಂ ಸದಸ್ಯರಾದ ಯಲ್ಲಪ್ಪ ಕಂಬಳಿ, ಪ್ರೇಮವ್ವ ಲಮಾಣಿ, ಭೀಮಪ್ಪ ಲಮಾಣಿ, ಪ್ರಶಾಂತ ಪಾಟಿ, ಶಿವಪ್ಪ ಕಾರಬಾರಿ, ಮಲ್ಲೇಶ ಲಮಾಣಿ, ಮಾಂತೇಶ ಲಮಾಣಿ, ಪ್ರಭಣ್ಣ ಬಗಲಿ, ವಾಸುದೇವ ತಳವಾರ, ಹನುಮಂತ ಮಾಚೇನಹಳ್ಳಿ, ಹನುಮಂತರೆಡ್ಡಿ ಬುಳ್ಳಪ್ಪನವರ, ಅಣ್ಣಪ್ಪ ರಣತೂರ, ಈರಣ್ಣ ಮರಡೂರ, ಕೊಟ್ರೇಶ ಮಾಚೇನಹಳ್ಳಿ, ಹಾಲಪ್ಪ ನಾವಿ, ಮಂಜಯ್ಯ ಹಿರೇಮಠ, ಕೊಟ್ರಯ್ಯ ಹಿರೇಮಠ, ದಾವಲಸಾಬ ನದಾಫ್, ಶಿವಪುತ್ರಪ್ಪ ಚನ್ನೂರ, ಶಿವಪುತ್ರಪ್ಪ ಹಲವಾಗಲಿ ಮುಂತಾದವರು ಉಪಸ್ಥಿತರಿದ್ದರು.



### ಅಬ್ಬಿಗೇರಿಯ ಶ್ರೀ ಅನ್ನದಾನೇಶ್ವರ ಮಠದ ಜಾತ್ರಾ ಮಹೋತ್ಸವ ನಿಮಿತ್ತ 24 ಜೋಡಿ ಸಾಮೂಹಿಕ ವಿವಾಹ

# ಶರಣ ಸಂಸ್ಕೃತಿಯಲ್ಲಿ ದಾಂಪತ್ಯಕ್ಕೆ ಶ್ರೇಷ್ಠ ಸ್ಥಾನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಂದು ದಾಂಪತ್ಯಕ್ಕೆ ಕಾಲಿಡುತ್ತಿರುವ ನೂತನ ದಂಪತಿಗಳು ನಿಜಕ್ಕೂ ಶಿವ-ಪಾರ್ವತಿ ಸ್ವರೂಪರು. ಸತಿ ಪತಿಗಳಿಬ್ಬರೂ ಎರಡು ದೇಹ ಒಂದೇ ಮನಸ್ಸು ಎನ್ನುವಂತೆ ಸುಖ ಸಂಸಾರವನ್ನು ನಡೆಸಬೇಕು. ಶರಣ ಸಂಸ್ಕೃತಿಯಲ್ಲಿ ದಾಂಪತ್ಯ ಜೀವನಕ್ಕೆ ಶ್ರೇಷ್ಠ ಸ್ಥಾನವಿದೆ. ದಂಪತಿಗಳು ಸುಖದಿಂದ ಬಾಳಬೇಕು ಎಂದು ಜಿಗೇರಿಯ ಗುರುಸಿದ್ಧ ಶಿವಾಚಾರ್ಯರು ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಶ್ರೀ ಅನ್ನದಾನೇಶ್ವರ ಮಠದ ಜಾತ್ರಾ ಮಹೋತ್ಸವ ನಿಮಿತ್ತ ಜರುಗಿದ 24 ಜೋಡಿ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು.

ವೈವಾಹಿಕ ಜೀವನದಲ್ಲಿ ದಂಪತಿಗಳ ನಡುವೆ ಪರಸ್ಪರ ತಿಳುವಳಿಕೆ, ಹೊಂದಾಣಿಕೆ, ಕಾಳಜಿ ಇದ್ದರೆ ಉತ್ತಮ ಕುಟುಂಬ ನಿರ್ವಹಣೆ, ಜೀವನ ಸಾಗಿಸಲು ಸಾಧ್ಯವಾಗುತ್ತದೆ. ಸಾಮೂಹಿಕ ವಿವಾಹಗಳಿಂದ ಆರ್ಥಿಕ ಹೊರೆ ತಗ್ಗಿ, ಪ್ರಗತಿಗೆ ಪೂರಕವಾಗುತ್ತದೆ. ಮದುವೆ ಪ್ರತಿಯೊಬ್ಬರ ಜೀವನದ ಮಹತ್ತರ ಘಟ್ಟ. ಇದಕ್ಕಾಗಿ ಅನಗತ್ಯ ಹಣ ವ್ಯರ್ಥ ಮಾಡುವ ಅಗತ್ಯವಿಲ್ಲ. ಶರಣರ ವಚನ ಸ್ಫೂರ್ತಿ ಗ್ರಂಥಗಳನ್ನು ಪ್ರತಿಯೊಬ್ಬರು ಪ್ರತಿನಿತ್ಯ ಪಠಣೆ ಮಾಡಿ ತಮ್ಮ ಜೀವನವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು. ನವ ಜೋಡಿಗಳು ನೂರು ಕಾಲ ಸುಂದರವಾದ ಸಂಸಾರವನ್ನು ನಡೆಸಿ ಸಮಾಜಕ್ಕೆ ಮಾದರಿಯಾಗಬೇಕು ಎಂದರು. ಬನವಾಸಿಯ ಶಿವಲಿಂಗ ಸ್ವಾಮೀಜಿ, ಮಹಾತ್ಮಪ್ಪ ಬಸವರಡ್ಡೆರ, ಗುರಣ್ಣ ಅವರಡ್ಡಿ, ಶರಣಯ್ಯ ಅರಳಲಿಮಠ, ಸಂಗಯ್ಯ ಮಠಪತಿ, ಬಸವರಾಜ ಪಲ್ಲೇದ, ಮಲ್ಲಿಕಾರ್ಜುನ ಕಲ್ಲೇಶಾನಿ, ಅಂದಪ್ಪ ವೀರಾಪೂರ, ಮಂಜುನಾಥ ಅಂಗಡಿ, ಬಸವರಾಜ ತಳವಾರ, ಮಹದೇವಪ್ಪ ಬಸವರಡ್ಡೆರ, ಬಸವರಾಜ ಬಾರಕೇರ, ಅಂದಪ್ಪ ಕಲ್ಲೇಶಾನಿ, ಶರಣಪ್ಪ ತಿಪ್ಪಶೆಟ್ಟಿ ಸೇರಿದಂತೆ ಶ್ರೀ ಅನ್ನದಾನೇಶ್ವರ ಸೇವಾ ಟ್ರಸ್ಟ್ ಕಮಿಟಿ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು.

ಹಾಲಕೆರೆ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಭಾರತೀಯ ಧರ್ಮ ಪರಂಪರೆಯಲ್ಲಿ ವಿವಾಹಕ್ಕೆ ತನ್ನದೇ ಆದ ಮಹತ್ತರ ಸ್ಥಾನವಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಸಮಾಜದಲ್ಲಿ ಆಗುತ್ತಿರುವ ಬದಲಾವಣೆಯಿಂದ ವಿವಾಹವು ಅದರ ಮೌಲ್ಯ ಕಳೆದುಕೊಳ್ಳುತ್ತಿದೆ. ನವ ದಂಪತಿಗಳು ಆದರ್ಶ ಗುಣಗಳನ್ನು ಅಳವಡಿಸಿಕೊಂಡು ಪರಸ್ಪರ ಹೊಂದಾಣಿಕೆಯಿಂದ ಜೀವನ ನಡೆಸಬೇಕು. ಪ್ರತಿಯೊಬ್ಬರೂ ತಮ್ಮ ಮಕ್ಕಳನ್ನು ಸಂಸ್ಕಾರಯುತವಾಗಿ ಬೆಳೆಸಬೇಕು ಎಂದರು.

# ಹಣ ಕಾಸಿನ ಕೊರತೆ ಇಲ್ಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜಿಲ್ಲೆಗಳಲ್ಲಿ ತುರ್ತು ಕುಡಿಯುವ ನೀರಿನ ಪೂರೈಕೆಗೆ ಜಿಲ್ಲಾಧಿಕಾರಿಗಳು ಕ್ರಿಯಾ ಯೋಜನೆ ರೂಪಿಸಿ, ಟಾಸ್ಕ್ ಫೋರ್ಸ್‌ನಿಂದ ಅನುಮೋದನೆ ಪಡೆದುಕೊಂಡು ಅನುಷ್ಠಾನಗೊಳಿಸಲು ಮುಖ್ಯಮಂತ್ರಿ ಸೂಚನೆ ನೀಡಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಮಾತನಾಡಿ, ಹಣಕಾಸಿನ ಕೊರತೆ ಇಲ್ಲ. ಎಷ್ಟು ಬೇಕಾದರೂ ಹಣ ಕೊಡುತ್ತೇವೆ. ಶುದ್ಧ ಕುಡಿಯುವ ನೀರಿಗೆ ರಾಜ್ಯದ ಒಂದೇ ಒಂದು ಗ್ರಾಮದಲ್ಲೂ ಸಮಸ್ಯೆ ಆಗಬಾರದು ಎಂದು ಜಿಲ್ಲಾಧಿಕಾರಿಗಳಿಗೆ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ಸೂಚನೆ ನೀಡಿದರು.




## ನಿಧನ

**ಮಹಾದೇವಿ ಪೂಜಾರ**



**ಅಣ್ಣಿಗೇರಿ:** ಪಟ್ಟಣದ ಕೆರಿ ಓಣಿ ನಿವಾಸಿ ಮಹಾದೇವಿ ಮಲ್ಲೇಶಪ್ಪ ಪೂಜಾರ (54) ಮಂಗಳವಾರ ನಿಧನರಾದರು. ಅವರಿಗೆ ಪತಿ (ಪ್ರಶಾಂತ ಟೈಲರ್) ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka